ಸಂಪುಟ : 10 ಸಂಚಿಕೆ: 60 ಪುಟ : 4+2 ಬೆಲೆ: 3.00 ಶುಕ್ರವಾರ ಎಪ್ರಿಲ್ 4 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 60 Pages : 4+2 Price : 3.00 Friday April 4 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಎಪ್ರಿಲ್ 4ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 22 - ದೊಡ್ಡ ಮಸೂತಿ ಲೈನ್, 2000 ಮನೆ, 1400 ಮನೆ ಲೈನ್, 800 ಮನೆ, ಮಸೂತಿಯ ಪೂರ್ತಿ ಭಾಗಗಳು. ವಾರ್ಡ್ ನಂ. 04 ರಲ್ಲಿ ಹುಯಿಲಗೋಳ ರಸ್ತೆ, ಬಲಭಾಗದ ಪೂರ್ತಿ ಭಾಗಗಳು, ಮಂಜುನಾಥ್ ನಗರ, ಬಿ.ಎಸ್.ಎನ್.ಎಲ್. ಆಫೀಸ್ ಕಣವಿ ಪ್ಲಾಟ್, 200 ಮನೆ ಲೈನ್, ಉಳಿದ ಭಾಗಗಳು,

ವಾರ್ಡ್ ನಂ. 27, 28 ಸ್ಟೇಡಿಯಂ, ನಂದೀಶ್ವರ ನಗರ, ಕುಲಕರ್ಣಿಯ ಲೈನ್, ಸಂಕಣ್ಣವರ ಲೈನ್, ರೊಟ್ಟಿಯವರ ಲೇಔಟ್, ಹೊಸಮನಿ ಅವರ ಲೈನ್, ತುಪ್ಪದ ಅವರ ಲೈನ್, ತಂಬ್ರಳ್ಳಿಮಠದ ಲೈನ್, ಜಿ.ಎಸ್. ಪಾಟೀಲ್‌ರ ಲೈನ್, ನಾಗರಕಟ್ಟಿ ಲೈನ್, ಮಲ್ಲಾಡದ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 06ರಲ್ಲಿ ಕೊಟಗಿ ಮಾಸ್ತರ್ ಲೈನ್, ಉಳಿದ ಭಾಗಗಳು, ವಾರ್ಡ್ ನಂ. 23, 20ರಲ್ಲಿ ಕಗ್ಗನಹಳ್ಳಿ ಹಾರೋಗೇರಿ ಲೈನ್, ಭಾಗ 2, ಹೆಬಸೂರ ಲೈನ್, ಹೊನ್ನೆತ್ತಮ್ಮನ ಲೈನ್-2 ಭಾಗ, ಸೋಮನಗೌಡ್ರ, ಈಟಿ ಅವರ ಲೈನ್, ಅಂಗನವಾಡಿ ಶಾಂತವ್ವನ ಅಡ್ಡೆ, ಗೋಡಿಯವರ ಲೈನ್, ಲಕ್ಕುಂಡಿಯವರ ಲೈನ್, ಮಾನ್ವಿ ಗೆಳೆಯರ ಬಳಗ ಲೈನ್, ಗಣಪತಿ ಗುಡಿ, ಅಕ್ಕಿ ಪ್ಲಾಟ್ ಲೈನ್, ಬಾಳಿಕಾಯಿ ಅವರ ಲೈನ್, ಉಳಿದ ಕೆಲವು ಭಾಗಗಳು.

**ಸೂಚನೆ:** ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಡ್ಡಿ ಮಾಫಿಯಾ: ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಬಾಹಿರವಾಗಿ ಹೆಚ್ಚಿನ ಬಡ್ಡಿ ವಿಧಿಸಿ ಮತ್ತು ಹಿಂಸೆ ನೀಡಿ ವಸೂಲಿ ಮಾಡುವವರ ವಿರುದ್ಧ ಗದಗ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿ, ತನಿಖೆ ಕೈಗೊಂಡಿದೆ. ಈ ಪ್ರಕರಣಗಳಲ್ಲಿ ಇನ್ನೂ ಕೆಲವು ಸಾಕ್ಷಿದಾರರು ಮುಂದೆ ಬಂದು ಘಟನೆ ಕುರಿತು ಮಾಹಿತಿ ನೀಡುವುದು ಅವಶ್ಯಕವಿದ್ದು, ಕಾರಣ ವಶಪಡಿಸಿಕೊಂಡ ದಾಖಲೆಗಳೊಂದಿಗೆ ತನಿಖಾಧಿಕಾರಿಗಳು ದಿ. 5-4-2025 ರಂದು ಸಂಭಾಪೂರ ರಸ್ತೆಯ ಪೊಲೀಸ್ ಭವನದಲ್ಲಿ ಮುಂಜಾನೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಹಾಜರ ಇರುವುದರಿಂದ ಸಾರ್ವಜನಿಕರು ಮುಂದೆ ಬಂದು ಈ ಪ್ರಕರಣಗಳಲ್ಲಿ ಹೆಚ್ಚಿನ ಮಾಹಿತಿ ನೀಡಬೇಕೆಂದು ಗದಗ ಜಿಲ್ಲಾ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಜಿಲ್ಲಾ ಪೊಲೀಸರಿಂದ ಭರ್ಜರಿ ಕಾರ್ಯಾಚರಣೆ ನಾಲ್ವರು ಅಂತರರಾಜ್ಯ ಕಳ್ಳರ ಬಂಧನ

# ಅವಳಿ ನಗರದಲ್ಲಿ ಕಳ್ಳರಿಗೆ ಜಾಗವಿಲ್ಲ!

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮೊನ್ನೆ ನಡೆದ 'ಪೊಲೀಸ್ ಧ್ವಜ ದಿನಾಚರಣೆ' ಕಾರ್ಯಕ್ರಮದಲ್ಲಿ ಮಾತನಾಡುತ್ತ, ಗದಗ ಜಿಲ್ಲಾ ಪೊಲೀಸ್ ಸರ್ವ ಸಮರ್ಥವಾಗಿದೆ, ಹೆಚ್ಚಿನ ಪ್ರಕರಣಗಳಲ್ಲಿ ಅಪರಾಧಿಗಳಿಗೆ ಶಿಕ್ಷೆಯೂ ಆಗುತ್ತಿದೆ ಎಂದಿದ್ದರು. ಪೊಲೀಸ್ ವರಿಷ್ಠಾಧಿಕಾರಿಗಳ ಈ ಮಾತು ಹೇಳಿಕೆಗಷ್ಟೇ ಸೀಮಿತವಲ್ಲ, ಕೃತಿಯಲ್ಲಿಯೂ ನಡೆಯುತ್ತಿದೆ ಎಂಬುದು ಸಾಬೀತಾಗುತ್ತಲೇ ಇದೆ.

ಅಂತರರಾಜ್ಯ ಕಿಲಾಡಿ ಕಳ್ಳರ ತಂಡವೊಂದು ಆಗಾಗ ಗದಗ-ಬೆಟಗೇರಿ ಅವಳಿ ನಗರದಲ್ಲಿ ತಮ್ಮ ಕೈಚಳಕ ತೋರಿಸಿ ನಾಪತ್ತೆಯಾಗುತ್ತಿತ್ತು. ಒಂದು ತಂಡ ಬೀಗ ಹಾಕಿದ್ದ ಮನೆಗಳನ್ನು ಟಾರ್ಗೆಟ್ ಮಾಡಿದರೆ, ಇನ್ನೊಂದು ತಂಡ ಚಿನ್ನದ ಆಭರಣಗಳನ್ನು ಹೊಸದರಂತೆ ಹೊಳೆಯುವ ಹಾಗೆ ಮಾಡುತ್ತೇವೆ ಎಂದು ವಂಚಿಸಿ ಪರಾರಿಯಾಗುತ್ತಿತ್ತು. ಈ ಅಂತರರಾಜ್ಯ ಕಳ್ಳರನ್ನು ಪತ್ತೆ ಮಾಡುವುದು ಖಾಕಿ ಪಡೆಗೆ ಸವಾಲೇ ಆಗಿತ್ತು. ಆದರೆ, ಭರ್ಜರಿ ಕಾರ್ಯಾಚರಣೆ ನಡೆಸಿದ ಗದಗ ಜಿಲ್ಲಾ ಪೊಲೀಸರು ಈ ಕಿಲಾಡಿ ಕಳ್ಳರನ್ನು ಸೆರೆಹಿಡಿದು ಜೈಲಿಗೆ ಅಟ್ಟಿದ್ದಾರೆ.




ಬೆಟಗೇರಿ ಬಡಾವಣೆಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ, ಹಳೆಯ ಚಿನ್ನವನ್ನು ಹೊಳೆಯುವ ಹಾಗೆ ಮಾಡುತ್ತೇವೆ ಎಂದು ಬಿಹಾರ ಮೂಲದ ದೀಪಕ್ ಹಾಗೂ ಬಿಪಿನ್‌ಕುಮಾರ ಎಂಬಾತ ವಂಚಿಸುತ್ತಿದ್ದ. 2024 ಜುಲೈ 3ರಂದು, ಬೆಟಗೇರಿ ಪೊಲೀಸ್ ಠಾಣಾ ವ್ಯಾಪ್ತಿಯ ಶಕುಂತಲಾ ಎಂಬುವರ ಮನೆಯಲ್ಲಿ 3 ಲಕ್ಷ 72 ಸಾವಿರ ರೂಪಾಯಿ ಮೌಲ್ಯದ 92 ಗ್ರಾಂ ಚಿನ್ನದ ಆಭರಣವನ್ನು ಹೊಳೆಯುವ ಹಾಗೆ ಮಾಡುತ್ತೇವೆ ಎಂದು ಹೇಳಿ ವಂಚಿಸಿದ್ದರು.




ಹೊಸದಾಗಿ ಒಂದು ವಿಧದ ಪೌಡರ್ ಬಂದಿದ್ದು, ಅದರಲ್ಲಿ ಹಾಕಿ ಸ್ವಚ್ಛಗೊಳಿಸುತ್ತೇವೆ ಎಂದು ಹೇಳಿ, ಅವರದೇ ಮನೆಯ ಪಾತ್ರೆಯೊಂದರಲ್ಲಿ ವಿಶೇಷ ಪೌಡರ್ ಹಾಕಿ, ಅವರು ಕೊಟ್ಟ ಆಭರಣವನ್ನೂ ಹಾಕಿದಂತೆ ಮಂಕುಬೂದಿ ಎರಚುತ್ತಿದ್ದರು. ಒಂದು ಗಂಟೆಯ ನಂತರ ಪಾತ್ರೆಯ ಮುಚ್ಚಳ ತೆರೆದು ನೋಡುವಂತೆ ತಿಳಿಸಿ ಅಲ್ಲಿಂದ ಪರಾರಿಯಾಗುತ್ತಿದ್ದರು. ಹೀಗೆ ಮೋಸ ಮಾಡುತ್ತಿದ್ದ ದೀಪಕ್ ಹಾಗೂ ಬಿಪಿನ್‌ಕುಮಾರ್ ಎನ್ನುವವರನ್ನು ಬಂಧಿಸಿ ಅವರಿಂದ ಚಿನ್ನವನ್ನು ವಶಕ್ಕೆ ಪಡೆಯಲಾಗಿದೆ ಎಂದು ಎಸ್‌ಪಿ ಬಿ.ಎಸ್. ನೇಮಗೌಡ ಮಾಹಿತಿ ನೀಡಿದ್ದಾರೆ.

ಪೊಲೀಸರ ಈ ಕಾರ್ಯಾಚರಣೆ, ಆರೋಪಿಗಳ ಬಂಧನದಿಂದ ಅವಳಿ ನಗರದ ಜನತೆ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಇಲಾಖೆಯ ಸಿಬ್ಬಂದಿಗಳ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇನ್ನೊಂದೆಡೆ, ತಮಿಳುನಾಡಿನಿಂದ ಬಸ್ ಹಾಗೂ ರೈಲ್ವೆ ಮೂಲಕ ಗದಗ ನಗರಕ್ಕೆ ಬಂದು, ಬೀಗ ಹಾಕಿರುವ ಮನೆಗಳನ್ನೇ ಗುರಿಯಾಗಿಸಿಕೊಂಡು ಕಳ್ಳತನ ನಡೆಸಿ ಪರಾರಿಯಾಗುತ್ತಿದ್ದ ತಮಿಳುನಾಡು ಮೂಲಕ ವೆಂಕಟೇಶ ಹಾಗೂ ಸೂರ್ಯ ಶೆಟ್ಟಿ ಇದುವರೆಗೆ 7 ಮನೆಗಳಲ್ಲಿ ತಮ್ಮ ಕೈಚಳಕ ತೆ-ೂರಿದ್ದರು. ಈ ಇಬ್ಬರು ಕಿಲಾಡಿ ಕಳ್ಳರು ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು ರಾಜ್ಯಗಳಲ್ಲಿಯೂ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ. ಗದಗ ಶಹರ ಪೊಲೀಸರು ವೆಂಕಟೇಶ ಹಾಗೂ ಸೂರ್ಯ ಶೆಟ್ಟಿಯನ್ನು ಬಂಧಿಸಿ ಅವರಿಂದ 7 ಲಕ್ಷ 60 ಸಾವಿರ ಮೌಲ್ಯದ 130 ಗ್ರಾಂ ಚಿನ್ನ ಹಾಗೂ 2 ಕೆಜಿ ಬೆಳ್ಳಿಯನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ನಮ್ಮ ಪೊಲೀಸರು ಒಳ್ಳೆಯ ಕೆಲಸ ಮಾಡಿದ್ದಾರೆ ಎಂದು ಎಸ್ಪಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

### ತಹಸೀಲ್ದಾರ ಕಾರ್ಯಾಲಯದ ಸಿಬ್ಬಂದಿಗಳಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಎಚ್ಚರಿಕೆ


# ಕಾರಣ ಬೇಡ, ಕೆಲಸ ಮಾಡಿ

■ ವಿಜಯಸಾಕ್ಷಿ ಸುದ್ದಿ, ರೋಣ

ಬರೀ ಸರ್ವರ್ ಸಮಸ್ಯೆಯನ್ನೇ ಕಾರಣವಾಗಿ ಹೇಳುವ ಬದಲು ಕೆಲಸ ಮಾಡುವ ಪದ್ಧತಿಯನ್ನು ರೂಢಿಸಿಕೊಳ್ಳಿ. ಸರ್ವರ್ ಇಲ್ಲದ ಸಂದರ್ಭದಲ್ಲಿ ಬೇರೆ ಕೆಲಸಗಳನ್ನು ನಿರ್ವಹಿಸಿದರೆ ನಿಮಗೆ ಒಳ್ಳೆಯದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳಿಗೆ ಸೂಚಿಸಿದರು.

ಅವರು ಗುರುವಾರ ತಹಸೀಲ್ದಾರ ಕಚೇರಿಗೆ ಭೇಟಿ ನೀಡಿ, ವಿವಿಧ ಕೊಠಡಿಗಳಿಗೆ ತೆರಳಿ ಸಿಬ್ಬಂದಿಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಿ ಮಾತನಾಡಿದರು.

ಎಲ್ಲದಕ್ಕೂ ಸರ್ವರ್ ಇಲ್ಲ ಎಂಬ ಉತ್ತರ ಹೇಳುವುದು ಉದ್ಯೋಗಿಯ ಲಕ್ಷಣವಲ್ಲ. ಬದಲಾಗಿ ಇಲಾಖೆಯ ಇನ್ನಿತರ ಅನೇಕ ಕೆಲಸಗಳಿರುತ್ತವೆ. ಸರ್ವರ್ ಬರುವವರೆಗೆ ಆ ಕೆಲಸಗಳನ್ನು ನಿರ್ವಹಿಸಬೇಕು. ಇದರಿಂದ ನಿಮ್ಮ ಮುಂದಿನ ಸಾಧನೆಗೆ ಅನುಕೂಲವಾಗುತ್ತದೆ. ಅದನ್ನು ಬಿಟ್ಟು ಕೇವಲ ನೆಪಗಳನ್ನು ಹೇಳಿದರೆ ನಿಮ್ಮ ತಹಸೀಲ್ದಾರರಿಗೆ ತೊಂದರೆಯಾಗುತ್ತದೆ. ಇದರಿಂದ ನಿಮಗೂ ತೊಂದರೆ.




ಹೀಗಾಗಿ, ಉತ್ತಮ ರೀತಿಯಲ್ಲಿ ಕೆಲಸ ನಿರ್ವಹಿಸಿ ಎಂದು ದಾಖಲಾತಿ ಡಿಜಟಲೀಕರಣ ಸಿಬ್ಬಂದಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ನಂತರ ಅವರು ವಿವಿಧ ಕೊಠಡಿಗಳಿಗೆ ತೆರಳಿ ಸಿಬ್ಬಂದಿಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಿ, ಸಾರ್ವಜನಿಕರ ಸಮಸ್ಯೆಗಳನ್ನು ನಿಗದಿತ ಸಮಯದಲ್ಲಿ ಬಗೆಹರಿಸಬೇಕು. ಇಲ್ಲದ ನೆಪಗಳನ್ನು ಹೇಳಿ ಅವರನ್ನು ಕಚೇರಿಗೆ ಅಲೆದಾಡಿಸಬೇಡಿ. ಮುಖ್ಯವಾಗಿ ಅವರ ದಾಖಲಾತಿಗಳನ್ನು ಮೊದಲೇ ಪರಿಶೀಲಿಸಿ ಅವರಿಗೆ ತಿಳುವಳಿಕೆ ನೀಡಿ, ಅಗತ್ಯ ದಾಖಲೆಗಳನ್ನು ತರುವಂತೆ ಸೂಚಿಸಿ. ನಿಮಗೂ, ಅವರಿಗೂ ಸಮಸ್ಯೆಗಳಾಗದಂತೆ ಪ್ರಾಮಾಣಿಕವಾಗಿ ಸೇವೆಯನ್ನು ಸಲ್ಲಿಸಿ ಎಂದರು.

ಉಪ ವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ ನಾಗರಾಜ ಕೆ, ಉಪತಹಸೀಲ್ದಾರ ಜೆ.ಟಿ. ಕೊಪ್ಪದ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಈಗ ಎಲ್ಲವೂ ಆಧುನೀಕರಣಗೊಂಡಿದೆ. ನಿಮ್ಮ ಸಾಧನೆಯನ್ನು ಯಂತ್ರಗಳು ಖಚಿತಪಡಿಸುತ್ತವೆ. ನೀವು ಬಾಯಿ ಮಾತಿನಿಂದ ಹೇಳುವುದಲ್ಲ, ಬದಲಾಗಿ ಸಾಧನೆಯನ್ನು ಸಾಕ್ಷೀಕರಿಸಬೇಕು. ಮುಖ್ಯವಾಗಿ ಹಳೆ ದಾಖಲಾತಿಗಳನ್ನು ಡಿಜಟಲೀಕರಣಗೊಳಿಸುವಲ್ಲಿ ರೋಣ ಹಿಂದೆ ಬಿದ್ದಿದೆ. ಇದು ಸರಿಯಾದ ಕ್ರಮವಲ್ಲ. ನಿಮ್ಮ ತಪ್ಪುಗಳನ್ನು ಸರಿಪಡಿಸಿಕೊಂಡು ಸಮರ್ಥವಾಗಿ ಕಾರ್ಯನಿರ್ವಹಿಸದಿದ್ದರೆ ಕಟ್ಟುನಿಟ್ಟಿನ ಕ್ರಮ ಅನಿವಾರ್ಯವಾಗಲಿದೆ ಎಂದು ಜಿಲ್ಲಾಧಿಕಾರಿಗಳು ಸಿಬ್ಬಂದಿಗಳನ್ನು ಎಚ್ಚರಿಸಿದರು.

## ರವಿ ಗುಂಜೀಕರ್ ಅಭಿನಂದನಾ ಸಮಾರಂಭ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ರಾಚೋಟೇಶ್ವರ ನಗರದ ವೀರಾಂಜನೆಯ ದೇವಸ್ಥಾನದಲ್ಲಿ ಡಾ. ರವಿ ಎಲ್. ಗುಂಜೀಕರ ಅವರ ಅಭಿಮಾನಿ ಬಳಗದಿಂದ ಗುರುವಾರ ಸಭೆ ಜರುಗಿತು.

ಈ ಸಭೆಯಲ್ಲಿ ಎಪ್ರಿಲ್ 4ರಂದು ರವಿ ಗುಂಜೀಕರ್ ಅವರ ಹುಟ್ಟುಹಬ್ಬದ ನಿಮಿತ್ತ ಅವರ ಅಭಿಮಾನಿಗಳ ಸಂಘದ ಉದ್ಘಾಟನೆ ಅಭಿನಂದನಾ ಸಮಾರಂಭ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಸಂಜೆ 4 ಗಂಟೆಗೆ ನಡೆಸಲು ತೀರ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಮಲ್ಲಸಮುದ್ರ ಓಂಕಾರಗಿರಿಯ ಓಂಕಾರೇಶ್ವರ ಮಠದ ಪೂಜ್ಯಶ್ರೀ ಫಕೀರೇಶ್ವರ ಶಿವಾಚಾರ್ಯ ಶ್ರೀಗಳು ಸಾನ್ನಿಧ್ಯ ವಹಿಸುವರು. ಗಣ್ಯ ಉದ್ಯಮಿ ರಾಜು ಗುಡಿಮನಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಗುರಣ್ಣ ಬಳಗಾನೂರು, ಬಿ.ಬಿ. ಅಸೂಟಿ, ವಿಜಯಕುಮಾರ ಗಡ್ಡಿ ಮುಂತಾದವರು ಭಾಗವಹಿಸುವರು.

ಸಭೆಯಲ್ಲಿ ಅಭಿಮಾನಿ ಬಳಗದ ಅಧ್ಯಕ್ಷ ಅರುಣಕುಮಾರ ಚವ್ಹಾಣ, ಉಪಾಧ್ಯಕ್ಷ ಡಾ. ಎಸ್.ಆರ್. ಹಿರೇಮಠ, ಎಚ್.ವೈ. ಸಂದಕದ, ಕೆ.ಎಫ್. ಹಳ್ಯಾಳ, ಆರ್.ಎಂ. ನಿಂಬನಾಯ್ಕರ, ಶಿವಾಜಿ ಪವನ, ಮಲ್ಲಿಕಾರ್ಜುನ ಹಿರೇಮಠ, ಮಂಜುನಾಥ ಮಾನೆ, ಭಾಷಾಸಾಬ ಮಲ್ಲಸಮುದ್ರ, ಕರಿಮಸಾಬ ಸುಣಗಾರ, ಮೌಲಾಸಾಬ ಗಚ್ಚಿ ಮುಂತಾದವರು ಭಾಗವಹಿಸಿದ್ದರು.

### ಜಾನಪದದಲ್ಲಿದೆ ಸಂಸ್ಕೃತಿ-ಸಂಸ್ಕಾರದ ಸಾರ: ಜಾನಪದ ಬಾಲಾಜಿ

# ಕಾಲೇಜಿನಲ್ಲಿ ಜಾನಪದ ಉತ್ಸವದ ಸಂಭ್ರಮ

■ ಜಾನಪದ ಹಾಡು-ನೃತ್ಯ-ಆಟಗಳ ಸಡಗರ ■ ಎಲ್ಲೆಡೆ ಜಾನಪದ ಬ್ರಿಗೇಡ್ ಕಟ್ಟುವ ಆಕಾಂಕ್ಷಿಗಿರಲಿ ಸಹಕಾರ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇವತ್ತಿಗೂ ಹಲವು ಬುಡಕಟ್ಟು ಜನಾಂಗ, ಗ್ರಾಮೀಣ ಪ್ರದೇಶದಲ್ಲಿ ಜಾನಪದ ಹಿನ್ನೆಲೆಯ ಸಂಪ್ರದಾಯ ಆಚರಣೆಗಳು ಬಳಕೆಯಲ್ಲಿವೆ. ಜಾನಪದದಲ್ಲಿ ಸಂಸ್ಕೃತಿ-ಸಂಸ್ಕಾರದ ಸಾರವಿದೆ ಎಂದು ಕನ್ನಡ ಜಾನಪದ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ.ಜಾನಪದ ಎಸ್.ಬಾಲಾಜಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಕಾಲೇಜಿನ ಸಾಂಸ್ಕೃತಿಕ ವಿಭಾಗದ ಸಹಯೋಗದಲ್ಲಿ ಹಮ್ಮಿಕೊಂಡ ಜಾನಪದ ಉತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಾನಪದ ಸಣ್ಣದಲ್ಲ. ತುಂಬಾ ದೊಡ್ಡದು. ನಮ್ಮ ಇಡೀ ಬದುಕೇ ಜಾನಪದ. ಗರ್ಭದಲ್ಲಿ ಇರುವ ಮಗುವಿನ ಹಂತದಲ್ಲೇ ಕುಬುಸದ ಕಾರಣ ಹೆಸರಿನಲ್ಲೇ ಜಾನಪದ ಆರಂಭಗೊಳ್ಳುತ್ತದೆ. ಬದುಕಿನುದ್ದಕ್ಕೂ ಅದು ಜೀವಂತವಾಗಿರುತ್ತದೆ. ಬರುವ ದಿನಗಳಲ್ಲಿ ಬೆಂಗಳೂರಿನಂತೆ ಎಲ್ಲೆಡೆ ಜಾನಪದ ಬ್ರಿಗೇಡ್ ಕಟ್ಟುವ ಆಕಾಂಕ್ಷೆ ಇದೆ. ಎಲ್ಲರ ಸಹಕಾರ ಮುಖ್ಯ ಎಂದು ಅವರು ಕೋರಿದರು.




### ಮೊಳಗಿದ ಆರ್‌ಸಿಬಿ ಘೋಷಣೆ

ಜಾನಪದ ಉತ್ಸವ ಕಾರ್ಯಕ್ರಮದ ನಿಮಿತ್ತ ಕಾಲೇಜಿನ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಸಾಂಪ್ರದಾಯಿಕ ಉಡುಗೆಯಲ್ಲಿ ಸಂಭ್ರಮಿಸಿದರು. ಸಮಾರಂಭದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವ ವೇಳೆ ಆರ್‌ಸಿಬಿ.. ಆರ್‌ಸಿಬಿ.. ಆರ್‌ಸಿಬಿ... ಎನ್ನುವ ಸಂತೋಷದ ಘೋಷಣೆ ಜೋರಾಗಿ ಮೊಳಗಿತು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯ್ಕ ಮಾತನಾಡಿ, ಇಂದಿನ ಮೊಬೈಲ್ ಯುಗದಲ್ಲಿ ಜಾನಪದ ಹಿನ್ನಲೆಯ ಆಟೋಪಚಾರಗಳು ಕ್ಷೀಣಿಸುತ್ತಿವೆ. ಜಾನಪದ ಕಲೆಯನ್ನು ಉಳಿಸಿ, ಬೆಳೆಸಿಕೊಂಡು ಮುನ್ನಡೆಯುವ ಹೊಣೆ ಇಜದಿನ ಯುವಜನತೆ ಮೇಲಿದೆ ಎಂದು ಅಭಿಪ್ರಾಯಪಟ್ಟರು.

ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದ ಕನ್ನಡ ವಿಭಾಗದ ಸಹ ಪ್ರಾಧ್ಯಾಪಕರು, ಕಾಲೇಜಿನ ಸಾಂಸ್ಕೃತಿಕ ವಿಭಾಗದ ಸಂಚಾಲಕರಾದ ಡಾ.ಭಾಗ್ಯಜ್ಯೋತಿ ಜಾನಪದ ಉತ್ಸವ ಕಾರ್ಯಕ್ರಮ ಆಚರಣೆಯ ಉದ್ದೇಶ, ಪ್ರಯೋಜನಗಳನ್ನು ವಿವರಿಸಿದರು. ವೇದಿಕೆಯಲ್ಲಿ ಬೋಧಕರಾದ ವೈ.ಬಿ.ಅಂಗಡಿ, ಡಾ.ಟಿ.ವಿ.ವಾರುಣಿ, ಶಿವಣ್ಣ ಎಂ. ಇದ್ದರು. ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು. ಡಾ.ತುಕಾರಾಮ ನಾಯ್ಕ ವಂದಿಸಿದರು. ಡಾ.ವೀರಣ್ಣ ಸಜ್ಜನರ್ ಜಾನಪದ ಆಟೋಟಗಳ ವಿಜೇತರಿಗೆ ಬಹುಮಾನ ವಿತರಣೆಯ ಕಾರ್ಯಕ್ರಮ ನಡೆಸಿಕೊಟ್ಟರು. ಸಮಾರಂಭದಲ್ಲಿ ಡಾ.ಜಾನಪದ ಬಾಲಾಜಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬಳಿಕ ಕಾಲೇಜಿನ ವಿದ್ಯಾರ್ಥಿಗಳಿಂದ ಜಾನಪದ ಗೀತ ಗಾಯನ, ನೃತ್ಯ ಮತ್ತಿತರ ಮನರಂಜನಾ ಕಾರ್ಯಕ್ರಮಗಳು ನಡೆದವು.

## ಸಂಪಾದಕೀಯ

# 1ನೇ ತರಗತಿ ಪ್ರವೇಶ; 6 ವರ್ಷ ಕಡ್ಡಾಯವಾಗಲಿ

ರಾಜ್ಯದಲ್ಲಿ ಈಗ 1ನೇ ತರಗತಿ ಪ್ರವೇಶ ಪ್ರಕ್ರಿಯೆ ಬಗ್ಗೆ ಭಾರಿ ಚರ್ಚೆ ನಡೆಯುತ್ತಿದೆ. ಒಂದನೇ ತರಗತಿಗೆ ಪ್ರವೇಶ ಬಯಸುವ ಮಕ್ಕಳ ವಯಸ್ಸು ಕಡ್ಡಾಯವಾಗಿ ಆರು ವರ್ಷ ಪೂರ್ಣಗೊಂಡಿರಬೇಕು.

ಸರ್ಕಾರದ ಈ ನಿರ್ಧಾರದಿಂದಾಗಿ ಆರು ವರ್ಷ ಪೂರ್ಣಗೊಳ್ಳಲು ಕೆಲವೇ ದಿನ ಬಾಕಿ ಇರುವಂತಹ ಮಕ್ಕಳಿಗೆ, 1ನೇ ತರಗತಿಗೆ ಪ್ರವೇಶ ಸಿಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ಅನೇಕ ಪೋಷಕರು ಸರ್ಕಾರದ ಮೊರೆ ಹೋಗಿದ್ದು ವಯೋಮಿತಿ ಸಡಿಲಿಕೆ ಮಾಡುವಂತೆ ವಿನಂತಿಸಿದ್ದಾರೆ.

ಯಾವುದೇ ಮಗು 1ನೇ ತರಗತಿಗೆ ಪ್ರವೇಶ ಪಡೆಯಲು ಕಡ್ಡಾಯವಾಗಿ 6 ವರ್ಷ ಪೂರ್ಣಗೊಂಡಿರಬೇಕು ಎನ್ನುವ ನಿಯಮವನ್ನು 2022 ರಲ್ಲಿ ಮಾಡಲಾಗಿತ್ತು. ಮುಂದೆ 2023-24ರಲ್ಲಿ ಒಂದಷ್ಟು ಸಡಿಲಿಕೆ ಮಾಡಲಾಯಿತು. ಗೊಂದಲ ಶುರುವಾಗಿದ್ದೇ ಆವಾಗ.

ಹೀಗಾಗಿ ಸರ್ಕಾರ ಪ್ರಸಕ್ತ ಶೈಕ್ಷಣಿಕ ವರ್ಷದಿಂದ 6 ವರ್ಷ ಕಡ್ಡಾಯ ಎನ್ನುವ ನಿಯಮವನ್ನು ಮತ್ತೊಮ್ಮೆ ಜಾರಿಗೊಳಿಸಿತು. ಈ ಹಿಂದೆ ಮಾಡಿದ ಸಡಿಲಿಕೆ ಕಾರಣದಿಂದ ಎಲ್‌ಕೆಜಿ ಮತ್ತು ಯುಕೆಜಿ ಪ್ರವೇಶ ಪಡೆದ ಮಕ್ಕಳು ಈಗ, 1ನೇ ತರಗತಿಗೆ ಪ್ರವೇಶ ಬಯಸುತ್ತಿದ್ದಾರೆ. ಹಿಂದಿನ ವರ್ಷ ಮಾಡಿದ ಒಂದು ಸಣ್ಣ ಸಡಿಲಿಕೆ ಈ ವರ್ಷ ಗೊಂದಲಕ್ಕೆ ಕಾರಣವಾಗಿದೆ.

ಸರ್ಕಾರ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಆರು ವರ್ಷದ ನಿಯಮವನ್ನ ಕಟ್ಟುನಿಟ್ಟಿನಿಂದ ಜಾರಿಗೊಳಿಸಬೇಕು. ಅಂದಾಗ ಎಲ್‌ಕೆಜಿ ಮತ್ತು ಯುಕೆಜಿಗೆ ಪ್ರವೇಶ ಪಡೆಯಲು ಕನಿಷ್ಠ ನಾಲ್ಕು ವರ್ಷ ಪೂರ್ಣಗೊಂಡಿರಬೇಕು ಎನ್ನುವ ವಯೋಮಿತಿಯ ನಿಯಮವನ್ನ ಶಾಲೆಗಳೇ ಅಳವಡಿಸಿಕೊಳ್ಳಲು ಸಾಧ್ಯವಾಗುತ್ತದೆ.

ಭವಿಷ್ಯದಲ್ಲಿ ಇಂತಹ ಸಮಸ್ಯೆಗಳು ಉದ್ಭವಿಸದಂತೆ ಮಾಡಲು ಇಂತಹ ಕಠಿಣ ನಿಯಮ ಅನಿವಾರ್ಯ.


## ಪ್ರಥಮ ವರ್ಷದ ಪುಣ್ಯಾರಾಧನೆ ನಿಮಿತ್ತ ವಿವಿಧ ವಿಧಾಯಕ ಕಾರ್ಯಕ್ರಮಗಳ ಕುರಿತ ಲೇಖನ

# ಚಿತ್ತರಗಿ ಪರಿವಾರದ ಆಲದ ಮರ

ಶಿವ ಶರಣರ ಹಾದಿಯಲ್ಲಿ ಸ್ವಾಭಿಮಾನದ ಬದುಕು ಕಳೆದ ಸಜ್ಜನ ನಿವೃತ್ತ ಇಂಜಿನಿಯರ್ ಬಸವರಾಜ ಚಿತ್ತರಗಿ ನಮ್ಮೆನ್ನೆಲ್ಲ ಅಗಲಿ ಒಂದು ವರ್ಷವಾದರೂ ಇಂದಿಗೂ ನಮ್ಮ ಜೊತೆ ಇದ್ದಾರೆ, ಎಲ್ಲಿಗೋ ಹೋಗಿರಬಹುದೆಂಬ ಭಾವ ಅವರ ಕುಟುಂಬಕ್ಕೆ, ಅವರ ಸ್ನೇಹಿತರಿಗೆ ಇನ್ನೂ ಇದೆ. ಎಷ್ಟೊಂದು ನೆನಪುಗಳನ್ನು ಬಿಟ್ಟು ಹೋದ ಬಸವರಾಜ ಅವರು ಚಿತ್ತರಗಿ ಪರಿವಾರದ ಆಲದ ಮರವಾಗಿದ್ದವರು. ಆ ಎಲ್ಲ ಪರಿವಾರದ ಕಷ್ಟ ಕಾರ್ಪಣ್ಯಗಳಿಗೆ ಸ್ಪಂದಿಸಿದವರು. ತಾನಾಯಿತು, ತನ್ನ ಕೆಲಸವಾಯಿತು ಎಂಬ ಅವರ ಜೀವನದ ಹಾದಿ ಅತ್ಯಂತ ಸರಳ. ಮತ್ತೊಬ್ಬರ ಗೋಜಿಗೆ ಹೋಗದೇ ಸ್ವಾಭಿಮಾನದಿಂದ ಬದುಕು ಸಾಗಿಸಿದವರು. ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಇಡೀ ಕುಟುಂಬಕ್ಕೆ ಆಸರೆಯಾಗುವುದರ ಜೊತೆಗೆ ಸಮಾಜಮುಖಿ ಕೆಲಸದಲ್ಲಿಯೂ ತೊಡಗಿಕೊಂಡವರು.

ಬಸವರಾಜ ಚಿತ್ತರಗಿ ಅವರ ಮನೆತನ ಮೂಲತಃ ಬಿಜಾಪೂರ ಜಿಲ್ಲೆಯ ಶಿರೂರು ಗ್ರಾಮವಾದರೂ ಗದುಗಿನ ನಂಟು ಶತಮಾನಕ್ಕೂ ಹೆಚ್ಚು. 10ನೇ ತರಗತಿ ಇದ್ದಾಗಲೇ ತಂದೆಯನ್ನು ಕಳೆದಕೊಂಡ ಚಿತ್ತರಗಿಯವರು ಸ್ವ ಸಾಮರ್ಥ್ಯದಿಂದ ತಂದೆಯ ಆದರ್ಶಗಳನ್ನು ಮೈಗೂಡಿಸಿಕೊಂಡು ಮೇಲೆ ಬಂದವರು. ಇಂಜಿನಿಯರ್ ಪದವಿ ಮುಗಿಸಿ ಲೋಕೋಪಯೋಗಿ ಇಲಾಖೆಯಲ್ಲಿ ಮೂರು ದಶಕಗಳಿಗೂ ಹೆಚ್ಚುಕಾಲ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿ ತಮ್ಮದೇ ಆದ ಹೆಜ್ಜೆಗುರುತುಗಳನ್ನು ಮೂಡಿಸಿದ್ದಾರೆ. ಸರಳ ಸಜ್ಜನಿಕೆಗೆ ಹೆಸರಾದ ಚಿತ್ತರಗಿಯವರನ್ನು ಇಡೀ ಇಲಾಖೆ ಅತ್ಯಂತ ಪ್ರೀತಿಯಿಂದ ಇಂದಿಗೂ ಕಾಣುತ್ತಿದೆ. ತಮಗೆ ಎಷ್ಟೇ ಪ್ರಭಾವವಿದ್ದರೂ ಎಲ್ಲಿಯೂ ತೋರಿಸದವರು. ತಮ್ಮ ನೆರಳಿಗೆ ತಾವು ಹೆದರಿ ಸ್ವಾಭಿಮಾನಕ್ಕೆ ಎಂದಿಗೂ ಧಕ್ಕೆ ಬರದಂತೆ ಬದುಕಿದ ಇವರ ಆದರ್ಶ ಜೀವನ ಸ್ಮರಣೀಯ.

ಲೋಕದ ದುಃಖವನ್ನೆಲ್ಲ ನಿವಾರಿಸಲು ನಾವೇನು ಬುದ್ಧ ಅಲ್ಲ, ಏಸು ಅಲ್ಲ, ಜನತೆಯ ಕಣ್ಣೀರು ಒರೆಸುವ ಶಕ್ತಿ ನಮಗಿರದಿದ್ದರೂ ಜನತೆಯ ಕಣ್ಣೀರಿಗೆ ನಾವು ಕಾರಣರಾಗದೇ ಇರುವ ಅವಕಾಶ ನಮಗಿದೆ. ನಾವು ಉಪಕಾರ ಮಾಡಲು ಅಶಕ್ತರಾಗಿದ್ದರೂ ಚಿಂತೆಯಿಲ್ಲ. ಪೀಡೆ ಕೊಡುವವರು ಮಾತ್ರ ಆಗಬಾರದು ಎಂಬ ತತ್ವದಡಿ ಜೀವನ ಸಾಗಿಸಿದ ಬಸವರಾಜ ಚಿತ್ತರಗಿಯವರು ಸಾಕಷ್ಟು ನೆನಪುಗಳನ್ನು ಸ್ನೇಹಿತರ ಮಧ್ಯೆ ಬಿಟ್ಟು ಹೋಗಿದ್ದಾರೆ.



ಸಭಾಪತಿ ಬಸವರಾಜ ಹೊರಟ್ಟಿಯವರೊಂದಿಗೆ ಕಳೆದ 5 ದಶಕಗಳಿಂದ ಒಡಹುಟ್ಟಿದವರಂತೆ ಸಹೋದರನಾಗಿ ಗುರುತಿಸಿಕೊಂಡವರು. ಅಣ್ಣ ಬಸವರಾಜ ಹೊರಟ್ಟಿಯವರ ಸೇವೆ ಮಾಡುವುದೆಂದರೆ ಬಸವರಾಜ ಚಿತ್ತರಗಿ ಅವರಿಗೆ ಎಲ್ಲಿಲ್ಲದ ಪ್ರೀತಿ. ಅವರ ಊಟೋಪಚಾರ, ಅವರ ಆರೋಗ್ಯ, ನೋವು-ನಲಿವುಗಳಿಗೆ ಸದಾ ಸ್ಪಂದಿಸುವ ಮೂಲಕ ಮಾತೃಹೃದಯಿಯಾಗಿದ್ದರು. ಹೊರಟ್ಟಿಯವರು ಸಹ ಚಿತ್ತರಗಿ ಪರಿವಾರದೊಂದಿಗೆ ಅವಿನಾಭಾವ ಸಂಬಂಧ, ತಮ್ಮ ತಾಯಿಗಿಂತ ಹೆಚ್ಚು ಪ್ರೀತಿ, ಮಮತೆಯನ್ನು ಬಸವರಾಜ ಚಿತ್ತರಗಿಯವರ ತಾಯಿಯಾದ ನಿಂಗಮ್ಮ ಅವರೊಂದಿಗೆ ಹೊಂದಿದ್ದರು.

ಸ್ನೇಹಮಯಿ ಬಸವರಾಜ ಚಿತ್ತರಗಿಯವರು ಸದಾ ಪರೋಪಕಾರ ಗುಣವನ್ನು ಹೊಂದುವ ಮೂಲಕ ಎಲ್ಲ ಸಮಾಜದೊಂದಿಗೆ ಆತ್ಮೀಯತೆಯನ್ನು ಬೆಳೆಸಿಕೊಂಡವರು. ವೃತ್ತಿಪರತೆಯಲ್ಲಿಯೂ ಅಷ್ಟೇ ನಿಷ್ಠೆಯಿಂದ ಮೂರು ದಶಕಗಳಿಗೂ ಹೆಚ್ಚುಕಾಲ ಲೋಕೋಪಯೋಗಿ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಮೂಲಕ ಎಲ್ಲಿಯೂ ಒಂದು ಕಪ್ಪು ಚುಕ್ಕೆ ಇಲ್ಲದೇ ಸೇವೆ ಸಲ್ಲಿಸಿದ್ದಾರೆ. ಇನ್ನೂ ಎರಡು ವರ್ಷ ಸೇವೆ ಮಾಡುವ ಅವಕಾಶವಿದ್ದರೂ ಇಲಾಖೆಗೆ ಸಮರ್ಪಕವಾಗಿ ಸೇವೆ ಸಲ್ಲಿಸಲು ಸಾಧ್ಯವಾಗುತ್ತಿಲ್ಲವೆಂಬ ಭಾವನೆಯಿಂದ ಸ್ವಯಂ ನಿವೃತ್ತಿ ಪಡೆದು ಸಮಾಜಮುಖಿ ಸೇವೆಯಲ್ಲಿ ತೊಡಗಿದ್ದರು.

ತಮ್ಮ 16ನೇ ವಯಸ್ಸಿನಿಂದಲೇ ಹಲವಾರು ಕಷ್ಟ ಕಾರ್ಪಣ್ಯಗಳೊಂದಿಗೆ ಹೋರಾಟದ ಬದುಕನ್ನು ರೂಪಿಸಿಕೊಂಡವರು. ತಾವು ಕಷ್ಟ ಉಂಡು ಕುಟುಂಬಕ್ಕೆ ಸಿಹಿ ಹಂಚಿದವರು. ಇಡೀ ಪರಿವಾರಕ್ಕೆ ತಮ್ಮ ನೋವನ್ನು ತೋರ್ಪಡಿಸದೇ ಚಿತ್ತರಗಿ ಪರಿವಾರವನ್ನು ಸದಾ ನಂದನವನವನ್ನಾಗಿಸುವಂತೆ ನೋಡಿಕೊಂಡವರು. ತಮ್ಮ 69 ವರ್ಷಗಳ ಜೀವಿತಾವಧಿಯಲ್ಲಿ ಯಾರೊಬ್ಬರಿಗೂ ಕೇಡನ್ನು ಬಯಸದೇ ಎಲ್ಲರಿಗೂ ಒಳಿತಾಗಲಿ ಎಂದು ಬಯಸಿದವರು. ಇವರ ಜೀವನ ಇತರರಿಗೆ ಮಾದರಿ. ಅವರ ಅಗಲಿಕೆಯಿಂದ ಬಸವರಾಜ ಚಿತ್ತರಗಿ ಅವರ ಧರ್ಮಪತ್ನಿ ವಿಜಯಲಕ್ಷ್ಮೀ, ಮಗನಾದ ಮಹಾಂತೇಶ, ಹೆಣ್ಣುಮಕ್ಕಳಾದ ಜ್ಯೋತಿ ಮತ್ತು ಅಶ್ವಿನಿ ಅವರು ತಂದೆಯನ್ನು ಕಳೆದುಕೊಂಡ ನೋವಿನಲ್ಲಿದ್ದರೂ ಅವರು ಹಾಕಿಕೊಟ್ಟ ಆದರ್ಶಗಳನ್ನು, ಪರಂಪರೆಗಳನ್ನು ಮುಂದುವರೆಸಿಕೊಂಡು ಹೋಗುವ ಮೂಲಕ ಬಸವರಾಜ ಚಿತ್ತರಗಿಯವರ ಕೀರ್ತಿಯನ್ನು ಬೆಳಗುತ್ತಿದ್ದಾರೆ.

ಬಸವರಾಜ ಚಿತ್ತರಗಿಯವರು ಉಸಿರು ನಿಲ್ಲಿಸಿ ಒಂದು ವರ್ಷವಾದರೂ ಎಲ್ಲರ ಉಸಿರಿನಲ್ಲಿ ಉಸಿರಾಗಿ, ಹಸಿರಾಗಿ ಇದ್ದಾರೆ. ಅವರನ್ನು ನೆನೆಯುವುದೇ ಒಂದು ಸೌಭಾಗ್ಯ. ಆ ಹಿನ್ನೆಲೆಯಲ್ಲಿ ಪ್ರಥಮ ವರ್ಷದ ಪುಣ್ಯಾರಾಧನೆಯೊಂದಿಗೆ ವಿವಿಧ ವಿಧಾಯಕ ಕಾರ್ಯಕ್ರಮಗಳನ್ನು ಇದೇ ಎಪ್ರಿಲ್ 5ರಂದು ಅಕ್ಕನ ಬಳಗದ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಅಂದು ಬಸವರಾಜ ಚಿತ್ತರಗಿ ಹಾಗೂ ಸಿದ್ದಣ್ಣ ಚಿತ್ತರಗಿ ಅವರ ಭಾವಚಿತ್ರ ಅನಾವರಣ ಶ್ರೀಗಳ ಹಾಗೂ ವಿವಿಧ ಗಣ್ಯಮಾನ್ಯರ ಸಮ್ಮುಖದಲ್ಲಿ ನೆರವೇರಲಿದೆ. ತಾವು ಬನ್ನಿ, ಇತರರನ್ನೂ ಕರೆತನ್ನಿ. ಬಸವರಾಜ ಚಿತ್ತರಗಿ ಹಾಗೂ ಸಿದ್ದಣ್ಣ ಚಿತ್ತರಗಿ ಅವರ ಆತ್ಮಕ್ಕೆ ಶಾಂತಿಯನ್ನು ಕೋರೋಣ.

**– ಡಾ. ಬಸವರಾಜ ಧಾರವಾಡ.**

## ನಿಧನ



**ನೀಲಮ್ಮ ಈರಪ್ಪ ಬುರಡಿ**

ಲಕ್ಷ್ಮೇಶ್ವರ: ಪಟ್ಟಣದ ಕೆಂಚಲಾಪುರ ಓಣಿಯ ಕುಹಿನಶೆಟ್ಟಿ ಸಮಾಜದ ಹಿರಿಯರು, ಶತಾಯುಷಿ ನೀಲಮ್ಮ ಈರಪ್ಪ ಬುರಡಿ (105) ಗುರುವಾರ ನಿಧನ ಹೊಂದಿದ್ದಾರೆ. ಮೃತರಿಗೆ ಪುತ್ರ, ಈರ್ವರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವಿದೆ.

# ಶ್ರೀ ರಾಮ ಸೇನಾದಿಂದ ಆಕರ್ಷಕ ಪಥಸಂಚಲನ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರೀರಾಮ ಸೇನಾ ಲಕ್ಷ್ಮೇಶ್ವರ ತಾಲೂಕು ಘಟಕದಿಂದ ಎಪ್ರಿಲ್ 6ರಂದು ಶ್ರೀ ರಾಮ ನವಮಿ ಅಂಗವಾಗಿ ವಿಶೇಷ ಕಾರ್ಯಕ್ರಮ ಹಾಗೂ ಪಥಸಂಚಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಶ್ರೀರಾಮ ಸೇನಾ ಸಂಸ್ಥಾಪಕ ಪ್ರಮೋದ ಮುತಾಲಿಕ ಧರ್ಮಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಶ್ರೀ ರಾಮ ಸೇನಾ ಸ್ಥಾಪನೆಯಾಗಿ 20 ವರ್ಷಗಳಾಗಿದ್ದು, ಸಂಸ್ಥಾಪಕ ಹಾಗೂ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ ಮುತಾಲಿಕರಿಗೆ 70ನೇ ಸಂವತ್ಸರ ತುಂಬಲಿರುವ ನಿಮಿತ್ತ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಎ.6ರಂದು ಮಧ್ಯಾಹ್ನ 3.45ಕ್ಕೆ ಪ್ರಪ್ರಥಮವಾಗಿ ಲಕ್ಷ್ಮೇಶ್ವರ ಪಟ್ಟಣದಲ್ಲಿ ಶ್ರೀರಾಮ ಸೇನಾದ ನೂರಾರು ಕಾರ್ಯಕರ್ತರು ಗಣವೇಷಗಳೊಂದಿಗೆ ಆಕರ್ಷಕ ಪಥಸಂಚಲನ ನಡೆಸಲಿದ್ದಾರೆ. ಪಥಸಂಚಲನ ರಂಭಾಪುರಿ ಕಲ್ಯಾಣ ಮಂಟಪದಿಂದ ಪ್ರಾರಂಭಗೊಂಡು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಪಿಎಸ್‌ಬಿಡಿ ಗರ್ಲ್ಸ್ ಹೈಸ್ಕೂಲ್‌ನ ಕೋಟದ್ದೇವರಮಠದಲ್ಲಿ ಮುಕ್ತಾಯಗೊಳ್ಳಲಿದೆ. ನಂತರ 5 ಗಂಟೆಗೆ ಧರ್ಮಸಭೆ ನಡೆಯಲಿದೆ.

ಕಾರ್ಯಕ್ರಮದಲ್ಲಿ ಶ್ರೀ ರಾಮ ಸೇನಾ ಸಂಸ್ಥಾಪಕ ಅಧ್ಯಕ್ಷ ಪ್ರಮೋದ್ ಮುತಾಲಿಕ, ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ, ರಾಜ್ಯ ಶಾರೀರಿಕ ಪ್ರಮುಖ ಮಹೇಶ ರೋಖಡೆ, ಜಿಲ್ಲಾಧ್ಯಕ್ಷ ಸೋಮು ಗುಡಿ, ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಮುಖಂಡರಾದ ಬಸವರಾಜ ಚಕ್ರಸಾಲಿ, ಮುತ್ತು ಕರ್ಜಕಣ್ಣವರ ಸೇರಿದಂತೆ ತಾಲೂಕಿನ ಕಾರ್ಯಕರ್ತರು ಹಾಗೂ ಹಿಂದೂ ಸಂಘಟನೆಗಳ ಪ್ರಮುಖರು ಭಾಗವಹಿಸಲಿದ್ದು, ಈ ಕಾರ್ಯಕ್ರಮಕ್ಕೆ ಹಿಂದೂಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಸಂಘಟಕರು ಮನವಿ ಮಾಡಿದ್ದಾರೆ.

# ಶರಣರು ದಿವ್ಯ ಪ್ರಭೆಯಲ್ಲಿ ಅರಳಿದ ಕುಸುಮಗಳು!

**■ ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಮನುಕುಲದ ಉದ್ಧಾರಕ ಬಸವಣ್ಣನವರ ನೇತೃತ್ವದ ಶರಣ ಶರಣೆಯರು ತಮ್ಮ ವಚನಗಳ ಮೂಲಕ ಅನುಭಾವ ದರ್ಶನ ಮಾಡಿಸಿ, ಅಂತರಿಕವಾಗಿ ಸಡಿಲವಾಗಿದ್ದ ಸಮಾಜವನ್ನು ಸದೃಢಗೊಳಿಸಿ ಜ್ಞಾನದ ಬೆಳಕಿನ ದಿವ್ಯ ಪ್ರಭೆಯಲ್ಲಿ ಅರಳಿದ ಕುಸುಮಗಳಾದರು ಎಂದು ಉಪನ್ಯಾಸಕಿ ದಾ ಶಾಂತಾ ಲಕ್ಷ್ಮೇಶ್ವರ ಬಣ್ಣಿಸಿದರು.



ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಣ್ಣಿಗೇರಿ ತಾಲೂಕು ಘಟಕ ಮತ್ತು ಶಲವಡಿಯ ಬಸವೇಶ್ವರ ಸೇವಾ ಹಾಗೂ ಸಾಂಸ್ಕೃತಿಕ ಕಲಾಸಂಘ ಶಲವಡಿ ಗ್ರಾಮದಲ್ಲಿ ಏರ್ಪಡಿಸಿದ್ದ ಲಿಂಗೈಕ್ಯ ಹೊಸಕೇರಿ ವೀರಪ್ಪ ಹಾಗೂ ಶಕುಂತಲಾ ದೇವಿ ದತ್ತಿನಿದಿ ಕಾರ್ಯಕ್ರಮದಲ್ಲಿ ಶಿವಶರಣರ ವಚನ ಸಾಹಿತ್ಯ ಕುರಿತು ಅವರು ಮಾತನಾಡಿದರು.

ಧಾರವಾಡದ ಬೇಂದ್ರೆ ರಾಷ್ಟ್ರೀಯ ಸ್ಮಾರಕ ಟ್ರಸ್ಟಿನ ಅಧ್ಯಕ್ಷ ಡಾ. ಡಿ ಎಂ ಹಿರೇಮಠ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜಾತಿ, ಲಿಂಗ, ವರ್ಗ, ವರ್ಣಗಳ ಬೇಧಭಾವ ಮಾಡುತ್ತಿದ್ದ ಮೇಲ್ವರ್ಗದ ಜನರ ದಬ್ಬಾಳಿಕೆ, ಶೋಷಣೆ, ಅಸಮಾನತೆ, ಅಸ್ಪೃಶ್ಯತೆ, ಮೌಢ್ಯದ ವಿರುದ್ಧ ತಲೆ ಎತ್ತಿ ನಿಲ್ಲುವಂತೆ ಮಾಡಿದ ವಚನ ಧರ್ಮ ಸರ್ವಕಾಲಕ್ಕೂ ಶ್ರೇಷ್ಠ ಎಂದರು.

ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ ಎಂಬ ಒಂದೇ ವಚನವನ್ನು ಜೀವನದಲ್ಲಿ ಅಳವಡಿಸಿಕೊಂಡರೂ ಈ ಬದುಕು ಸಾರ್ಥಕ ಎಂದು ಸಮಾರಂಭದ ಸಾನಿಧ್ಯ ವಹಿಸಿದ್ದ ಶಲವಡಿ ಗುರುಶಾಂತೇಶ್ವರ ಸ್ವಾಮೀಜಿ ಹಾಗೂ ಅಡ್ನೂರು ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ನುಡಿದರು.

ದತ್ತಿದಾನಿ ಡಾ ಬಸವರಾಜ ಹೊಸಕೇರಿ ಅವರನ್ನು ಸನ್ಮಾನಿಸಲಾಯಿತು. ಪ್ರೊ ಸಿ ಎಸ್ ಹೊಸಮಠ ಅಧ್ಯಕ್ಷತೆ ವಹಿಸಿದ್ದರು. ಶಸಾಪ ತಾಲೂಕು ಘಟಕದ ಅಧ್ಯಕ್ಷ ಎನ್ ಎಂ ಯಲಬುರ್ಗಿ ಪ್ರಾಸ್ತವಿಕವಾಗಿ ಮಾತನಾಡಿದರು. ಚಂದ್ರಶೇಖರ ಸುರಕೋಡ, ವೀರೇಶ ಶಾನುಭೋಗರ, ಕಿರಣ ಬೂದಿಹಾಳ, ಲಿಂಗನಗೌಡ ಕುರಹಟ್ಟಿ, ಪಾಂಡುರಂಗ ಬಿರಸಲ್ ಮತ್ತಿತರರು ಉಪಸ್ಥಿತರಿದ್ದರು. ಪಿ ಕೆ ಕೊಕಾಟೆ ನಿರೂಪಿಸಿದರು. ವಿಜಯ ಮಹಾಂತೇಶ ಹೊಸಕೇರಿ ಸ್ವಾಗತಿಸಿದರು. ಎಂ ಕೆ ಹುರಕಡ್ಲಿ ವಂದಿಸಿದರು.




ಗದಗ ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಶ್ರೀ ಮಾರುತೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ರಥೋತ್ಸವವು ಸಂಭ್ರಮದಿಂದ ಜರುಗಿತು. ಮಾರುತೇಶ್ವರನಿಗೆ ವಿಶೇಷ ಪೂಜೆ, ಅಲಂಕಾರ ಮಾಡಲಾಗಿತ್ತು. ರಥವು ದೇವಸ್ಥಾನದ ಪಾದಗಟ್ಟಿ ತಲುಪಿದ ನಂತರ ಭಕ್ತರು ಆಕಾಶದ ಎತ್ತರಕ್ಕೆ ಹಾರುವ ಬಣ್ಣ ಬಣ್ಣದ ಸಿಡಿಮದ್ದುಗಳನ್ನು ಸಿಡಿಸಿ ಸಂಭ್ರಮಿಸಿದರು.

# ಸಾರ್ವಜನಿಕರ ಗಮನಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ - ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಆಸ್ತಿಗಳ ಮಾಲೀಕರಿಗೆ ಹಾಗೂ ಅನುಬೋಗದಾರರಿಗೆ ತಿಳಿಸುವುದೇನೆಂದರೆ 2025-26 ನೇ ಸಾಲಿಗೆ ಈ ಕೆಳಗಿನಂತೆ ಆಸ್ತಿ ತೆರಿಗೆ ದರಗಳನ್ನು ವಸತಿ ಕಟ್ಟಡಗಳಿಗೆ ಶೇ 3.5 % , ವಾಣಿಜ್ಯ ಮತ್ತು ಕೈಗಾರಿಕೆಗಳಿಗೆ ಶೇ 4.5 % , ಖಾಲಿ ನಿವೇಶನಗಳಿಗೆ ಶೇ 4 % ರಂತೆ ಪರಿಷ್ಕರಣೆ ಮಾಡಿದೆ. ದಿನಾಂಕ 1-4-2025 ರಿಂದ 30-4-2025 ರವರೆಗೆ ಶೇ 5 % ರಷ್ಟು ರಿಯಾಯತಿ , ದಂಡ ರಹಿತ ಪಾವತಿ ದಿ. 1-5-2025 ರಿಂದ 30-6-2025 ರವರೆಗೆ, ದಿ. 1-7-2025 ರಿಂದ ಆಸ್ತಿ ತೆರಿಗೆ ಮೇಲೆ ಪ್ರತಿ ತಿಂಗಳು ಶೇ 2 % ರಷ್ಟು ದಂಡ ವಿಧಿಸಲಾಗುವುದು. ಸಾರ್ವಜನಿಕರು ಸಕಾಲದಲ್ಲಿ ಆಸ್ತಿ ತೆರಿಗೆ ಪಾವತಿಸಿ ಗದಗ-ಬೆಟಗೇರಿ ಅಭಿವೃದ್ಧಿಗೆ ಸಹಕರಿಸಬೇಕೆಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಲಕ್ಷ್ಮೇಶ್ವರದ ಸರ್ಕಾರಿ ಮಾದರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ದೇವರ ದಾಸೀಮಯ್ಯನವರ ಜಯಂತಿ ಆಚರಿಸಲಾಯಿತು. ಈ ವೇಳೆ ಸಿಆರ್‌ಪಿ ಸತೀಶ ಬೋಮಲೆ ಮಾತನಾಡಿ, ಸಾಮಾಜಿಕ ಬದಲಾವಣೆಗೆ ಪ್ರೇರಣೆಯಾದ ದಾಸೀಮಯ್ಯನವರು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ವಿಶೇಷವಾದ ಕೊಡುಗೆ ನೀಡಿದ್ದಾರೆ ಎಂದರು. ಮುಖ್ಯೋಪಾಧ್ಯಾಯ ಬಿ.ಎಂ. ಕುಂಬಾರ, ಶಿಕ್ಷಕರಾದ ಎಚ್.ಡಿ. ನಿಂಗರೆಡ್ಡಿ, ಆರ್.ಎಮ್. ಶಿರಹಟ್ಟಿ, ಎಲ್.ಎ. ಬಣಕಾರ, ಆರ್.ಕೆ. ಉಪನಾಳ, ಎಚ್.ಎಫ್. ನದಾಫ್ ಮುಂತಾದವರಿದ್ದರು.

# ರೋಣ ಪುರಸಭೆ ಆಯವ್ಯಯ ವಿವರ

**■ ವಿಜಯಸಾಕ್ಷಿ ಸುದ್ದಿ, ಗದಗ**

ರೋಣ ಪುರಸಭೆಯ 2025-26ನೇ ಸಾಲಿನ ಅಂದಾಜು ಆಯವ್ಯಯವನ್ನು ಕೆ.ಎಂ.ಎ.ಬಿ.ಆರ್-2006 ನಿಯಮ 133/2ರ ಪ್ರಕಾರ ತಯಾರಿಸುವ ಪೂರ್ವದಲ್ಲಿ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ, ಸಂಘ-ಸಂಸ್ಥೆಗಳ ಮುಕ್ತ ಸಲಹೆ-ಸೂಚನೆಗಳನ್ನು ಪಡೆದು, ಅಂತಿಮವಾಗಿ ದಿನಾಂಕ:18-02-2025ರಂದು ಅಧ್ಯಕ್ಷರು, ಪುರಸಭೆ ರೋಣ ಇವರ ಅಧ್ಯಕ್ಷತೆಯಲ್ಲಿ 2025-26ನೇ ಸಾಲಿನ ಅಂತಿಮ ಅಂದಾಜು ಆಯವ್ಯಯ ಅನುಮೋದನೆ ನೀಡಿದ್ದು ವಿವರ ಹೀಗಿದೆ.ಅಂದಾಜು ಸ್ವೀಕೃತಿಗಳು-ರೂ. 14,52,69,595, ಅಂದಾಜು ಪಾವತಿಗಳು-ರೂ. 14,21,07,095.00, ಉಳಿತಾಯ-ರೂ. 31,62,500. ಅನುಮೋದನೆಯಾದ ಆಯವ್ಯಯ ಪ್ರತಿಯನ್ನು ಕಚೇರಿಯ ವೆಬ್‌ಸೈಟ್:http://www.ronatown.mrc.gov.in/ದಲ್ಲಿ ಅಪ್‌ಲೋಡ್ ಮಾಡಲಾಗಿದ್ದು, ಸಾರ್ವಜನಿಕರ ಪ್ರದರ್ಶನಕ್ಕೆ ಮುಕ್ತವಾಗಿರುತ್ತದೆ ಎಂದು ರೋಣ ಪುರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಸಾಹಿತ್ಯ ಸಮ್ಮೇಳನದ ದಿನಾಂಕ ಬದಲಾವಣೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಕುರ್ತಕೋಟಿಯಲ್ಲಿ ಗದಗ ತಾಲೂಕಾ 5ನೇ ಕನ್ನಡ ಸಾಹಿತ್ಯ ಸಮ್ಮೇಳನವು ಎಪ್ರಿಲ್ 5ರಂದು ನಿಗದಿಯಾಗಿತ್ತು. ಕಾರಣಾಂತರಗಳಿಂದ ಸದರಿ ದಿನಾಂಕದ ಬದಲಾಗಿ ಎಪ್ರಿಲ್ 18ರಂದು ಜರುಗುವುದಾಗಿ ಸಮ್ಮೇಳನದ ಸ್ವಾಗತ ಸಮಿತಿಯು ನಿರ್ಧರಿಸಿದೆ.

ಕಾರಣ, ಸರ್ವ ಕನ್ನಡಾಭಿಮಾನಿಗಳು ಸಹಕರಿಸಿ, ಭಾಗವಹಿಸಬೇಕೆಂದು ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ರಶ್ಮಿ ಅಂಗಡಿ ತಿಳಿಸಿದ್ದಾರೆ.

# ಹಸಿ-ಒಣ ಕಸಗಳನ್ನು ಬೇರ್ಪಡಿಸಿ ಹಾಕಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದಿನದಿಂದ ದಿನಕ್ಕೆ ಬೆಳೆಯುತ್ತಿರುವ ಪಟ್ಟಣದಲ್ಲಿ ಎಲ್ಲಡೆ ಕಸ ಸಂಗ್ರಹವಾಗುತ್ತಿದ್ದು, ಅದನ್ನು ಸರಿಯಾಗಿ ವಿಲೇವಾರಿ ಮಾಡುವದು ಪುರಸಭೆ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಪಟ್ಟಣದ ಜನನಿಬಿಡ ರಸ್ತೆಗಳ ಬದಿಗಳಲ್ಲಿ ಹಸಿ ಮತ್ತು ಒಣ ಕಸ ಬೇರ್ಪಡಿಸಿ ಹಾಕುವ ಸ್ಟೀಲ್ ಡಸ್ಟಬಿನ್‌ಗಳನ್ನು ಹಾಕಲಾಗುತ್ತಿದೆ. ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹೇಳಿದರು.



ಅವರು ಪುರಸಭೆ ಎದುರು ಹಸಿ ಕಸ-ಒಣ ಕಸ ಬೇರ್ಪಡಿಸುವ ಸ್ಟೀಲ್ ಡಸ್ಟಬಿನ್‌ಗಳನ್ನು ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಉದ್ಘಾಟಿಸಿದ ಸಂದರ್ಭದಲ್ಲಿ ಮಾತನಾಡಿದರು.

ಜನರು ಕಸವನ್ನು ರಸ್ತೆ, ಗಟಾರನಲ್ಲಿ ಚೆಲ್ಲದೆ ಕಸದ ಡಸ್ಟಬಿನ್‌ಗಳಲ್ಲಿಯೇ ಹಾಕಬೇಕು. ಅಂದಾಜು 6 ಲಕ್ಷ್ ರೂ ವೆಚ್ಚದಲ್ಲಿ 62 ಸ್ಟೀಲ್ ಡಸ್ಟಬಿನ್‌ಗಳನ್ನು ಸಾರ್ವಜನಿಕರು ಹೆಚ್ಚು ಅಡ್ಡಾಡುವ ಸ್ಥಳದಲ್ಲಿ, ದೇವಸ್ಥಾನ, ಮುಖ್ಯ ಬಜಾರ್ ರಸ್ತೆ, ಸರ್ಕಾರಿ ಆಸ್ಪತ್ರೆ, ಬಸ್‌ಸ್ಟ್ಯಾಂಡ್ ಇತ್ಯಾದಿ ಜಾಗದಲ್ಲಿ ಇವುಗಳನ್ನು ಅಳವಡಿಸಲಾಗುವುದು. ಸಾರ್ವಜನಿಕರು ಕಸವನ್ನು ಬೇರ್ಪಡಿಸಿ ಹಾಕಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಪುರಸಭೆಯಲ್ಲಿ ಪೌರಕಾರ್ಮಿಕರ ಕೊರತೆ ಇದ್ದು, ಈ ಕುರಿತಂತೆ ಸರಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಹಿರಿಯರಾದ ಚನ್ನಪ್ಪ ಕೋಲಕಾರ, ಪುರಸಭೆ ಸದಸ್ಯರುಗಳಾದ ರಾಜೀವ ಕುಂಬಿ, ಬಸವರಾಜ ಓದುನವರ, ಪ್ರವೀಣ ಬಾಳಿಕಾಯಿ, ವಿಜಯ ಕರಡಿ, ರಮೇಶ ಗಡದವರ, ಕಿರಣ ನವಲೆ, ನೀಲಪ್ಪ ಪೂಜಾರ, ಪ್ರಕಾಶ ಕೊಂಚಿಗೇರಿಮಠ, ಸಿದ್ದು ದುರಗಣ್ಣವರ, ಪುರಸಭೆ ಸಿಬ್ಬಂದಿಗಳಾದ ನೇತ್ರಾ ಹೊಸಮನಿ, ಬಸವಣೆಪ್ಪ ನಂದೆಣ್ಣವರ, ಉಮಾ ಬೆಳವಿಗಿ, ಸಿದ್ದಪ್ಪ ಬಾಲೆಹೊಸೂರ, ಸಿದ್ದು ಹಿರೇಮಠ ಮುಂತಾದವರಿದ್ದರು.

# ವಕ್ಫ್ ತಿದ್ದುಪಡಿ ಮಸೂದೆ ಸ್ವಾಗತಾರ್ಹ



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರ ವಕ್ಫ್ ತಿದ್ದುಪಡಿ ಮಸೂದೆ ತಂದಿರುವುದರಿಂದ ದೇಶದ ರೈತರು ನಿಟ್ಟುಸಿರು ಬಿಡುವಂತಾಗಿದೆ ಎಂದು ಬಿಜೆಪಿ ಮುಖಂಡ ಶಿವು ಹಿರೇಮನಿಪಾಟೀಲ ಸ್ವಾಗತಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇಶದ ಬೆನ್ನೆಲುಬಾಗಿರುವ ರೈತನ ಜಮೀನನ್ನು ವಕ್ಫ್ ಹೆಸರಿನಲ್ಲಿ ಕಬಳಿಸುವ ಕೆಟ್ಟ ಸಂಸ್ಕೃತಿ ದೇಶದಲ್ಲಿತ್ತು. ಆದರೆ ಈಗ ಪ್ರಧಾನಿ ನರೇಂದ್ರ ಮೋದಿರವರ ನೇತೃತ್ವದ ಕೇಂದ್ರ ಸರ್ಕಾರ ವಕ್ಫ್ ತಿದ್ದುಪಡಿ ಮಸೂದೆ ತಂದು ದೇಶದ ಬಡ ರೈತರನ್ನು ರಕ್ಷಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಲಿಷ್ಠ ಕೇಂದ್ರ ಸರ್ಕಾರ ವಕ್ಫ್ ಬೋರ್ಡ್ ಬಿಲ್ ಮಂಡನೆ ಮಾಡಿದ್ದು ಸಂತಸದ ವಿಷಯ.

ಸ್ವಾತಂತ್ರ್ಯಾನಂತರ ಒಂದು ರಾಜಕೀಯ ಪಕ್ಷದ ಕಪಿಮುಷ್ಠಿಯಲ್ಲಿದ್ದ ವಕ್ಫ್ ಬೋರ್ಡ್ ಕಾಯ್ದೆ ತಿದ್ದುಪಡಿಯು ದೇಶದ ಜನರಿಗೆ ಹಾಗೂ ಮುಸ್ಲಿಂ ಮಹಿಳೆಯರಿಗೆ ಸಂತಸ ತಂದಿದೆ ಎಂದು ಅವರು ವಕ್ಫ್ ತಿದ್ದುಪಡಿ ಮಸೂದೆಯನ್ನು ಸ್ವಾಗತಿಸಿದ್ದಾರೆ.

### ಅಮ್ಮಿನಬಾವಿ ಸಂಸ್ಥಾನ ಪಂಚಗೃಹ ಹಿರೇಮಠದ ಧರ್ಮ ಸಮಾವೇಶದಲ್ಲಿ ರಂಭಾಪುರಿ ಜಗದ್ಗುರುಗಳ ನುಡಿ

# ಭಾವೈಕ್ಯದ ಬದುಕಿನಿಂದ ಮನುಕುಲಕ್ಕೆ ನೆಮ್ಮದಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಎಲ್ಲಾ ವೈರುಧ್ಯಗಳನ್ನು ಮರೆತು ಕೂಡಿ ಬಾಳಲು ಪ್ರಯತ್ನಿಸಬೇಕೆಂದು ಭಾರತೀಯ ಸಕಲ ಧರ್ಮ ಸಿದ್ಧಾಂತಗಳು ಬಯಸುತ್ತವೆ. ಆಗ ಅಂಕುರಿಸುವ ಭಾವೈಕ್ಯದ ಬದುಕಿನಿಂದ ಮನುಕುಲಕ್ಕೆ ನೆಮ್ಮದಿ ಸಾಧ್ಯವಾಗುತ್ತದೆ ಎಂದು ಬಾಳೆಹೊನ್ನೂರಿನ ರಂಭಾಪುರಿ ಪೀಠದ ಶ್ರೀಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರು ನುಡಿದರು.

ಅವರು ತಾಲೂಕಿನ ಅಮ್ಮಿನಬಾವಿ ಸಂಸ್ಥಾನ ಪಂಚಗೃಹ ಹಿರೇಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಜನಜಾಗೃತಿ ಧರ್ಮ ಚಿಂತನ ಸಮಾವೇಶವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಧರ್ಮ ಮತ್ತು ಸಮಾಜ ಛಿದ್ರವಾಗಲು ಯಾರೂ ಅವಕಾಶ ಕೊಡಬಾರದು. ಸಕಲ ಜೀವಾತ್ಮರಿಗೂ ಲೇಸನ್ನೇ ಬಯಸಿದ ವೀರಶೈವ ಧರ್ಮದ ವಿಶಾಲ ವಿಚಾರಗಳನ್ನು ಅರ್ಥ ಮಾಡಿಕೊಂಡಾಗ ಎಲ್ಲಿಯೂ ದ್ವಂದ್ವಗಳು ಹುಟ್ಟಿಕೊಳ್ಳುವದಿಲ್ಲ. ರಂಭಾಪುರಿ ಪೀಠದ ಶಾಖಾಮಠವಾಗಿರುವ ಅಮ್ಮಿನಬಾವಿ ಸಂಸ್ಥಾನ ಪಂಚಗೃಹ ಹಿರೇಮಠದ ಪ್ರಾಚೀನತೆ ಬಸವ ಪೂರ್ವ ಯುಗಕ್ಕೆ ಸೇರಿದ್ದಾಗಿದೆ. ಈ ನಿಟ್ಟಿನಲ್ಲಿ ವೀರಶೈವ ಧರ್ಮದ ಚಾರಿತ್ರಿಕ ಘನತೆ ಎದ್ದು ಕಾಣುತ್ತದೆ. ಇಂತಹ ಎಲ್ಲ ಸಪ್ರಮಾಣ ಸಂಗತಿಗಳನ್ನು ಮರೆಮಾಚಲು ನಡೆದಿರುವ ವ್ಯವಸ್ಥಿತ ಪ್ರಯತ್ನಗಳ ವಿಚಾರಗಳನ್ನು ಯಾರೂ ಸ್ವೀಕರಿಸಬಾರದು ಎಂದು ರಂಭಾಪುರಿ ಜಗದ್ಗುರುಗಳು ಸ್ಪಷ್ಟಪಡಿಸಿದರು.



ನೊಣವಿನಕೆರೆ ಸೋಮೇಕಟ್ಟೆ ಕಾಡಸಿದ್ಧೇಶ್ವರಮಠದ ಶ್ರೀಅಭಿನವ ಕಾಡಸಿದ್ಧೇಶ್ವರ ಸ್ವಾಮೀಜಿ, ಮಹಾರಾಷ್ಟ್ರ ನಾಗಣಸೂರ ವಿರಕ್ತಮಠದ ಡಾ. ಅಭಿನವ ಬಸವಲಿಂಗ ಸ್ವಾಮೀಜಿ, ಕಲಬುರ್ಗಿ ಬೆಳಗುಂಪಾ ಬೃಹನ್ಮಠದ ಅಭಿನವ ಪರ್ವತೇಶ್ವರ ಶಿವಾಚಾರ್ಯ ಸ್ವಾಮೀಜಿ ಹಾಗೂ ಬ್ಯಾಹಟ್ಟಿ ಹಿರೇಮಠದ ಡಾ. ಸತೀಶ ಗುರೂಜಿ, ಗುರುಮೂರ್ತಿ ಯರಗಂಬಳಿಮಠ ಮಾತನಾಡಿದರು.

ಅಮ್ಮಿನಬಾವಿ ಪಂಚಗೃಹ ಹಿರೇಮಠದ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ಸತ್ತಿಗೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಹೆಗಡಳ್ಳಿ ಹಿರೇಮಠದ ಷಡ್ಭಾವ ರಹಿತೇಶ್ವರ ಶಿವಾಚಾರ್ಯ ಸ್ವಾಮೀಜಿ, ಕಲಘಟಗಿ ಹನ್ನೆರಡುಮಠದ ಅಭಿನವ ಮಡಿವಾಳ ಶಿವಾಚಾರ್ಯ ಸ್ವಾಮೀಜಿ, ಮೊರಬ ಜಡಿಮಠದ ಅಭಿನವ ಮಹೇಶ್ವರ ಶಿವಾಚಾರ್ಯ ಸ್ವಾಮೀಜಿ, ಹುಣಸಿಕಟ್ಟಿ ಹಿರೇಮಠದ ಬಸವರಾಜ ದೇವರು ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

ಧಾಮುಲ್ ನಿರ್ದೇಶಕಿ ಶಿವಲೀಲಾ ವಿನಯ ಕುಲಕರ್ಣಿ, ಕಾಂಗ್ರೆಸ್ ಮುಖಂಡರುಗಳಾದ ಈಶ್ವರ ಶಿವಳ್ಳಿ, ಅರವಿಂದ ಏಗನಗೌಡರ, ಸಾಮಾಜಿಕ ಕಾರ್ಯಕರ್ತ ಮಂಜುನಾಥ ಮಕ್ಕಳಗೇರಿ, ಅಮ್ಮಿನಬಾವಿ ಗ್ರಾ.ಪಂ ಅಧ್ಯಕ್ಷೆ ನೀಲವ್ವ ತಿದಿ, ಸದಸ್ಯೆ ಪದ್ಮಾವತಿ ದೇಸಾಯಿ, ಕಾಮಣಿ ವೈದ್ಯ ಡಾ. ನಿತಿನ್‌ಚಂದ್ರ ಹತ್ತಿಕಾಳ, ವಿದ್ಯಾಚೇತನ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಸಂಗಯ್ಯ ಹಿರೇಮಠ, ವಕೀಲ ಶಕ್ತಿ ಹಿರೇಮಠ, ಶಿಕ್ಷಕ ಟಿ.ಎಂ. ದೇಸಾಯಿ, ಶಶಿಧರಶಾಸ್ತ್ರಿ ಹಿರೇಮಠ ಡೋಣಿ, ವೀರೇಶಕುಮಾರ ಮಳಲಿ, ಸಿದ್ಧರಾಮ ಬ್ಯಾಕೋಡ ಸಿಂದಗಿ ಅವರನ್ನು ಗೌರವಿಸಲಾಯಿತು.

ಬಿ.ಸಿ. ಕೊಳ್ಳಿ ಸ್ವಾಗತಿಸಿದರು. ಸಿಂಚನಾ ಶಂಕರ ಯಡಳ್ಳಿ ಭರತನಾಟ್ಯ ಪ್ರದರ್ಶನ ನೀಡಿದರು.

ಅಮ್ಮಿನಬಾವಿ ಸಂಸ್ಥಾನ ಪಂಚಗೃಹ ಹಿರೇಮಠದ ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ತಮ್ಮ ಎಲ್ಲಾ ಕಾರ್ಯಗಳ ಯಶಸ್ಸಿಗೆ ಅಮ್ಮಿನಬಾವಿ, ಮರೇವಾಡ, ಕರಡಿಗುಡ್ಡ, ತಿಮ್ಮಾಪೂರ, ಕೌಲಗೇರಿ ಗ್ರಾಮಗಳ ಸಕಲ ಸದ್ಭಕ್ತರ ಸಹಕಾರ ಮತ್ತು ರಂಭಾಪುರಿ ಜಗದ್ಗುರುಗಳ ಆಶೀರ್ವಾದವೇ ಕಾರಣವಾಗಿದೆ ಎಂದರು.

# ಮಕ್ಕಳ ಕಲಿಕೆಯ ಬಗ್ಗೆ ಕಾಳಜಿಯಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಕಲಿಕೆಯಲ್ಲಿ ಪೋಷಕರ ಪಾತ್ರ ಪ್ರಮುಖವಾಗಿದೆ. ಮಕ್ಕಳನ್ನು ಕಡ್ಡಾಯವಾಗಿ ಶಾಲೆಗಳಿಗೆ ಸೇರಿಸಬೇಕು. ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗದಂತೆ ನಾವೆಲ್ಲರೂ ಕಾಳಜಿ ವಹಿಸಬೇಕು. ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಪೋಷಕರು ಮುಂದಾಗಬೇಕೆಂದು ಸಂಪನ್ಮೂಲ ವ್ಯಕ್ತಿ ಕೆ.ಎಸ್. ಬೇಲೇರಿ ಹೇಳಿದರು.



ಅವರು ಗುರುವಾರ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಗಂಗಾಪೂರಪೇಟೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ. 14 ಇವುಗಳ ಸಂಯೋಗದಲ್ಲಿ ಜರುಗಿದ 1ನೇ ವರ್ಗದ ದಾಖಲಾತಿ ಪ್ರಕ್ರಿಯೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಆರು ವರ್ಷ ಮೇಲ್ಪಟ್ಟ ಹೆಣ್ಣಿರಲಿ-ಗಂಡಿರಲಿ, ತಪ್ಪದೇ ಪಾಲಕರು ಸರ್ಕಾರಿ ಶಾಲೆಗಳಲ್ಲಿ ಮಕ್ಕಳನ್ನು ಸೇರಿಸಿ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸಬೇಕು. ಗುಣಮಟ್ಟದ ಶಿಕ್ಷಣ, ಸಮವಸ್ತ್ರ, ಹಾಲು, ಪಠ್ಯಪುಸ್ತಕ, ಆರೋಗ್ಯಪೂರ್ಣವಾದ ಬಿಸಿಯೂಟ, ಶೂ ಭಾಗ್ಯ, ವಿದ್ಯಾರ್ಥಿ ವೇತನದಂತಹ ಮಹತ್ತರವಾದ ಯೋಜನೆಗಳನ್ನು ಸರಕಾರ ಯಶಸ್ವಿಯಾಗಿ ಅನುಷ್ಠಾನಗೊಳಿಸಿ ಉಚಿತವಾಗಿ ವಿತರಣೆ ಮಾಡುತ್ತಿದೆ. ಪಾಲಕರು ತಮ್ಮ ಮಕ್ಕಳನ್ನು ಶಾಲೆಗೆ ಸೇರಿಸಿ ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಿ ಅವರ ಭವಿಷ್ಯತ್ತನ್ನು ಉಜ್ವಲಗೊಳಿಸಬೇಕು ಎಂದರು.

ಮುಖ್ಯೋಪಾಧ್ಯಾಯ ಬಿ.ಎಸ್. ಮೆಣಸಿನಕಾಯಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸಲು ಪಾಲಕರ ಸಹಕಾರ ಅತ್ಯವಶ್ಯ. ಉಚಿತ ಸರ್ಕಾರಿ ಸೌಲಭ್ಯದೊಂದಿಗೆ ದಾನಿಗಳ ಸಹಾಯವನ್ನು ಪಡೆಯಲಾಗುತ್ತಿದೆ. ಕಡ್ಡಾಯವಾಗಿ ಮಕ್ಕಳನ್ನು ಶಾಲೆಗೆ ದಾಖಲಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಎಸ್.ಸಿ. ಚಳಗೇರಿ, ಎಸ್.ಸಿ. ಹಿರೇಮಠ, ಶಿಕ್ಷಕರಾದ ಎಲ್.ಎಚ್. ಮಲ್ಲಾಪೂರ, ಜೆ.ಆರ್. ನೀರಲಗಿ, ಎಸ್.ಎಂ. ಬಸವನಗೌಡ್ರ, ಜೆ.ಎಸ್. ಘೋರ್ಪಡೆ, ಎಸ್.ಡಿ.ಎಂ.ಸಿ ಸದಸ್ಯರು, ಪಾಲಕರು ಪಾಲ್ಗೊಂಡಿದ್ದರು.

# ಸರಕಾರಿ ಕಾಲೇಜುಗಳು ವಿದ್ಯಾರ್ಥಿಗಳ ಜೀವನಾಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸರಕಾರಿ ಕಾಲೇಜುಗಳು ಗ್ರಾಮೀಣ ವಿದ್ಯಾರ್ಥಿಗಳ ಜೀವನಾಡಿಯಾಗಿವೆ. ಉತ್ತಮ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಜೀವನಕ್ಕೆ ಅವಶ್ಯಕವಿರುವ ಮಾರ್ಗದರ್ಶನವನ್ನು ನೀಡುತ್ತಿರುವುದು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಕಾರಣವಾಗಿದೆ ಎಂದು ಕಾಲೇಜು ಶಿಕ್ಷಣ ಇಲಾಖೆಯ ಧಾರವಾಡ ಪ್ರಾದೇಶಿಕ ಕೇಂದ್ರದ ಜಂಟಿ ನಿರ್ದೇಶಕ ಪ್ರಕಾಶ ಹೊಸಮನಿ ಹೇಳಿದರು.



ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರಕಾರಿ ಕಾಲೇಜಿಗೆ ಭೇಟಿ ನೀಡಿ ಪ್ರಾಧ್ಯಾಪಕರೊಂದಿಗೆ ಅವರು ಸಂವಾದ ನಡೆಸಿದರು.

ಸರಕಾರಿ ಕಾಲೇಜುಗಳಿಗೆ ಸಾಮಾನ್ಯವಾಗಿ ಕೂಲಿಕಾರರ ಮಕ್ಕಳು, ಆರ್ಥಿಕವಾಗಿ ಸಶಕ್ತರಲ್ಲದವರೇ ಹೆಚ್ಚಾಗಿ ಬರುತ್ತಾರೆ. ಅವರಲ್ಲಿ ಧೈರ್ಯ ಮತ್ತು ಆತ್ಮವಿಶ್ವಾಸವನ್ನು ತುಂಬಿ ಅವರನ್ನು ಮುಖ್ಯ ವಾಹಿನಿಗೆ ತರುವುದು ಅವಶ್ಯಕವಾಗಿದೆ. ಅದಕ್ಕಾಗಿ ಎಲ್ಲ ಪ್ರಾಧ್ಯಾಪಕರೂ ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆ ಕಾಳಜಿ ಮಾಡಬೇಕೆಂದು ಹೊಸಮನಿ ಹೇಳಿದರು.

ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಈ ಕಾಲೇಜು ಮುಂಚೂಣಿಯಲ್ಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಇದನ್ನು ಸದಾವಕಾಲವೂ ಮುಂದುವರೆಸಿಕೊಂಡು ಹೋಗಬೇಕೆಂದರು. ಪ್ರತಿ ವಿಭಾಗದಲ್ಲಿಯೂ ಹೆಚ್ಚಿನ ಮಕ್ಕಳು ಪ್ರವೇಶ ಪಡೆಯುವಂತೆ ಮಾಡುವಲ್ಲಿ ಪ್ರಾಧ್ಯಾಪಕರ ಪಾತ್ರ ಮಹತ್ವದ್ದಿದೆ ಎಂದು ಹೊಸಮನಿ ತಿಳಿಸಿದರು.

ಕಾಲೇಜಿನ ಪ್ರಾಯೋಗಿಕ ತರಬೇತಿ ಹಾಗು ಕಚೇರಿ ವಿಭಾಗಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು, ವಿದ್ಯಾರ್ಥಿಗಳು ಹಾಗೂ ಪ್ರಾಧ್ಯಾಪಕರಿಗೆ ಅನೇಕ ಸಲಹೆ, ಸೂಚನೆಗಳನ್ನು ನೀಡಿ ಎಲ್ಲರೂ ಕಾಲೇಜು ಅಭಿವೃದ್ಧಿಗಾಗಿ ಒಮ್ಮನದಿಂದ ಶ್ರಮಿಸಬೇಕೆಂದರು.

ಪ್ರಾಚಾರ್ಯ ಎಸ್.ಎಲ್. ಗುಳೇದಗುಡ್ಡ, ಶಿವಮೂರ್ತಿ ಕುರೇರ, ಸುನಂದಾ ಮುಂಜಿ, ಜಯಶ್ರೀ ಮುತಗಾರ, ಅಂಜನಮೂರ್ತಿ ಕೆ.ಎಚ್, ಅನಿಲಕುಮಾರ, ಶಶಿಕಲಾ ವಿ.ಎಸ್, ಕೆ.ಆರ್. ಪಾಟೀಲ, ನಸ್ರೀನಾಬಾನು ಜಮಾದಾರ, ವಿರೂಪಾಕ್ಷಪ್ಪ ಸಂಗನಾಳ, ಶಿವಪ್ಪ ಕುರುಬರ, ಅಯ್ಯಪ್ಪ, ವಿ.ಸಿ. ಇಲ್ಲೂರ, ಎಂ.ಎಫ್. ತಹಸೀಲ್ದಾರ, ಕೆ.ಎನ್. ಕಟ್ಟಿಮನಿ, ಕಿರಣ ರಂಜಣಗಿ, ಎನ್.ಎಸ್. ಹೊನ್ನೂರ, ಚಂದ್ರು ರಾಥೋಡ, ಬಸವರಾಜ ಮಡಿವಾಳರ, ಚಂದ್ರು ಸಂಶಿ, ಬಿ.ಕೆ. ಕಂಬಳಿ, ಪ್ರೇಮಾ ಕಾತ್ರಾಳ, ಶ್ವೇತಾ ಹುಣಸಿಮರದ, ಶಂಕರ ನರಗುಂದ, ಸಿದ್ದು ನವಲಗುಂದ, ಮಲ್ಲಪ್ಪ ಸಮಗಂಡಿ ಇನ್ನಿತರರಿದ್ದರು.

### ರಾಜ್ಯ ಗುಪ್ತವಾರ್ತೆ ನಿರ್ದೇಶಕ ಹೇಮಂತ್ ಎಂ. ನಿಂಬಾಳ್ಕರ್‌ಗೆ

# ಮುಖ್ಯಮಂತ್ರಿಗಳ ಸ್ವರ್ಣಪದಕ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯದಲ್ಲಿ ನಕ್ಸಲ್ ಚಟುವಟಿಕೆಗಳನ್ನು ಶೂನ್ಯಗೊಳಿಸಲು ವಿಶೇಷ ಮುತುವರ್ಜಿಯಿಂದ ಪೊಲೀಸ್ ಕಾರ್ಯಾಚರಣೆಯ ಮುಂದಾಳತ್ವ ವಹಿಸಿ, ಮಾರ್ಗದರ್ಶನ ನೀಡುವ ಮೂಲಕ ಎಲ್ಲ ನಕ್ಸಲರನ್ನು ಶರಣಾಗುವಂತೆ ಮಾಡಿದ ರಾಜ್ಯ ಗುಪ್ತವಾರ್ತೆ ನಿರ್ದೇಶಕ ಹೇಮಂತ್ ಎಂ. ನಿಂಬಾಳ್ಕರ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ವರ್ಣಪದಕ ಪ್ರದಾನ ಮಾಡಿದರು.

ಬೆಂಗಳೂರಿನ ಕೋರ ಮಂಗಲದ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಪರೇಡ್ ಮೈದಾನದಲ್ಲಿ ಬುಧವಾರ ಬೆಳಿಗ್ಗೆ ಪೊಲೀಸ್ ಧ್ವಜ ದಿನಾಚರಣೆ ಸಮಾರಂಭದಲ್ಲಿ ಪದಕ ಪ್ರದಾನ ಮಾಡಲಾಯಿತು. 1998ರ ಬ್ಯಾಚಿನ ಐಪಿಎಸ್ ಅಧಿಕಾರಿಯಾಗಿರುವ ಹೇಮಂತ್ ಎಂ.ನಿಂಬಾಳ್ಕರ್ ಅವರು ಪ್ರಸ್ತುತ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ.

## ಅತ್ಯಾಚಾರ ಪ್ರಕರಣ: ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಶಾಕ್-ಜಾಮೀನು ಅರ್ಜಿ ವಜಾ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಬಿಗ್ ಶಾಕ್ ಕೊಟ್ಟಿದೆ. ಪ್ರಕರಣದಿಂದ ಕೈಬಿಡುವಂತೆ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿ ವಜಾಗೊಂಡಿದೆ. ಇನ್ನು ಅತ್ಯಾಚಾರ ಪ್ರಕರಣದ ವಿಚಾರಣೆಯನ್ನು ಎಪ್ರಿಲ್ 9ಕ್ಕೆ ಮುಂದೂಡಿದೆ.

ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ನಾಲ್ಕು ಪ್ರಕರಣಗಳು ದಾಖಲಾಗಿದ್ದು, ಈ ನಾಲ್ಕು ಪ್ರಕರಣದ ಜಾಮೀನು ಅರ್ಜಿಗಳು ಸಹ ವಜಾಗೊಂಡಿವೆ.

ಅಶ್ಲೀಲ ದೃಶ್ಯ ಪ್ರಕರಣ ಸೇರಿದಂತೆ ಇತರೆ ಒಟ್ಟು ನಾಲ್ಕು ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಆಗಸ್ಟ್ ನಲ್ಲಿ 2,144 ಪುಟಗಳ ಚಾರ್ಜ್ ಶೀಟ್ ಸಲ್ಲಿಸಿತ್ತು. ಇದರ ಬೆನ್ನಲ್ಲೇ ಪ್ರಜ್ವಲ್ ರೇವಣ್ಣ ಸಹ ಜಾಮೀನಿಗಾಗಿ ಕೆಳಗಿನ ಕೋರ್ಟ್ ನಲ್ಲಿ ಕಸರತ್ತು ನಡೆಸಿದ್ದರು.

ಆದರೆ ಜಾಮೀನು ಕೊಡಲು ಕೋರ್ಟ್ ನಿರಾಕರಿಸಿದೆ. ಇದೇ ವೇಳೆ ಆರೋಪಿ ಮೇಲಿರುವ ಆರೋಪಗಳನ್ನು ನ್ಯಾಯಾಧೀಶರು ಒತ್ತಿ ಹೇಳಿದರು, ಆರೋಪ ಓದಿ ಹೇಳುವಾಗ ನ್ಯಾಯಾಧೀಶರ ಮುಂದೆಯೇ ಕೈ ಮುಗಿದು ಪ್ರಜ್ವಲ್ ರೇವಣ್ಣ ಕಣ್ಣೀರು ಹಾಕಿದರು.

## ವಿಜಯನಗರದಲ್ಲಿ ಮಳೆ ಅವಾಂತರ: ಹತ್ತಾರು ಎಕರೆ ಬಾಳೆ ಬೆಳೆ ನಾಶ, ರೈತರು ಕಂಗಾಲು!

■ವಿಜಯಸಾಕ್ಷಿ ಸುದ್ದಿ, ವಿಜಯನಗರ

ಜಿಲ್ಲೆಯಲ್ಲಿ ಸುರಿದ ಭಾರೀ ಗಾಳಿ-ಮಳೆಗೆ ಅಪಾರ ನಷ್ಟ ಸಂಭವಿಸಿದೆ. ವಿಜಯನಗರದ ಹೊಸಪೇಟೆಯ ಹೊಸೂರು ಮಾಗಾಣಿಯಲ್ಲಿ ಹತ್ತಾರು ಎಕರೆಯಲ್ಲಿ ಬೆಳೆದಿದ್ದ ಲಕ್ಷಾಂತರ ರೂಪಾಯಿ ಮೌಲ್ಯದ ಬಾಳೆ ಬೆಳೆ ನೆಲಕಚ್ಚಿರುವ ಘಟನೆ ಜರುಗಿದೆ. ಘಟನೆಯಿಂದ ರೈತರು ಕಂಗಾಲಾಗಿದ್ದಾರೆ.

ಒಂದೇ ತಿಂಗಳಿನಲ್ಲಿ ಕೈಗೆ ಬರುತ್ತಿದ್ದ ಬಾಳೆಗೊನೆಗಳು ನೆಲಕ್ಕುರುಳಿವೆ. ಒಂದು ಕೆಜಿಗೆ 18-20 ರೂ. ಬಾಳೆ ಮಾರಾಟ ಮಾಡುತ್ತಿದ್ದ ರೈತರಿಗೆ ಈಗ ದೊಡ್ಡ ಪ್ರಮಾಣದಲ್ಲಿ ನಷ್ಟವಾಗಿದೆ.

# ಸಮಾಜದ ಉತ್ತಮ ಪ್ರಜೆಗಳಾಗಿ ಬಾಳಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆಯ ಎಸ್‌ಎಸ್‌ಎಲ್‌ಸಿಯ 50ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಶಾಲೆಯ ಚಿತ್ರಕಲಾ ಶಿಕ್ಷಕ ಪ್ರವೀಣ ಗಾಯಕರ ಭಾವಚಿತ್ರಗಳ (ಪೋರ್ಟ್ರೇಟ್ ಫೋಟೋ) ವಿಶೇಷ ಕೊಡುಗೆ ನೀಡಿ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಮತ್ತು ಶಿಕ್ಷಕರ ಸಂಬಂಧ ಅತ್ಯಂತ ಶ್ರೇಷ್ಠ ಮತ್ತು ಸದಾ ಸ್ಮರಣೀಯವಾಗಿರುತ್ತದೆ. ಎಸ್‌ಎಸ್‌ಎಲ್‌ಸಿ ನಂತರ ಪಿಯುಸಿ, ಉನ್ನತ ಹಂತದ ಶಿಕ್ಷಣಕ್ಕೆ ಹೋಗುವ ವಿದ್ಯಾರ್ಥಿಗಳಾದ ನೀವು ಕಲಿಸಿದ ಗುರುಗಳು, ಶಾಲೆ, ತಂದೆ-ತಾಯಿಗಳ ಕೀರ್ತಿ ಹೆಚ್ಚಿಸುವ ಮೂಲಕ ಸಮಾಜದ ಉತ್ತಮ ಪ್ರಜೆಗಳಾಗಿ ಬಾಳಬೇಕು ಎಂದರು.

ಪ್ರಾಚಾರ್ಯರಾದ ಡಿ.ಸಿ. ನರೇಗಲ್, ಹಿರಿಯ ಶಿಕ್ಷಕಿ ಎಂ.ಆರ್. ಡಂಬಳ, ಶಿಕ್ಷಕರಾದ ಎಸ್.ಕೆ. ನದಾಫ್, ಅರ್ಜುನ ವಠಾರ, ವಿ.ಹೆಚ್. ರಾಠೋಡ, ಎಫ್.ಸಿ. ಹಮಸಾಗರ, ಎಸ್.ಎನ್. ತಳ್ಳಳ್ಳಿ, ಎಸ್.ಎ. ಬೆಟಗೇರಿ, ಸಿ.ಎಸ್. ನಾವಿ, ಸುಮಾ ಸಂಶಿ, ಲಕ್ಷ್ಮೀ ಡೊಳ್ಳಿನ ಸೇರಿ ಸಿಬ್ಬಂದಿಗಳಿದ್ದರು.

# ತೋಂಟದಾರ್ಯ ಜಾತ್ರೆಯ ನಿಮಿತ್ತ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

2025ನೇ ಸಾಲಿನ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಎಪ್ರಿಲ್ 5ರಂದು ಗದುಗಿನ ಶ್ರೀ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಬೆಳಿಗ್ಗೆ 9 ಗಂಟೆಗೆ ಯೋಗ ಶಿಬಿರ, ಬೆಳಿಗ್ಗೆ 10.30 ಗಂಟೆಗೆ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 9 ಗಂಟೆಗೆ ತೋಂಟದಾರ್ಯ ಮಠದ ಪಕ್ಕದ ಆವರಣದಲ್ಲಿ ಪುರುಷರ ಕಬಡ್ಡಿ ಪಂದ್ಯಾವಳಿ ಜರುಗುವುದು. ಶ್ರೀಮಠದ ಸದ್ಭಕ್ತರು, ಸಾರ್ವಜನಿಕರು, ಆಸಕ್ತರು ಕಾರ್ಯಕ್ರಮದ ಸದುಪಯೋಗ ಪಡೆಯಬೇಕೆಂದು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ ಮತ್ತು ಪದಾಧಿಕಾರಿಗಳು ವಿನಂತಿಸಿದ್ದಾರೆ.

# ಜಾತ್ರಾ ಮಹೋತ್ಸವದ ಅಂಗವಾಗಿ ಪ್ರವಚನ

■ವಿಜಯಸಾಕ್ಷಿ ಸುದ್ದಿ, ಗದಗ

2025ನೇ ಸಾಲಿನ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಎಪ್ರಿಲ್ 5ರಿಂದ 11ರವರೆಗೆ ಶ್ರೀಮಠದಲ್ಲಿ ಪ್ರತಿದಿನ 7.30 ಗಂಟೆಗೆ ಪೂಜ್ಯ ಶ್ರೀ ಡಾ. ಮಹಾಂತಪ್ರಭು ಮಹಾಸ್ವಾಮಿಗಳು, ವಿರಕ್ತಮಠ, ಶೇಗುಣಸಿ ಇವರಿಂದ ಪ್ರವಚನ ಜರುಗಲಿದೆ.

ಪ್ರವಚನ ಕಾರ್ಯಕ್ರಮದಲ್ಲಿ ಶ್ರೀಮಠದ ಸದ್ಭಕ್ತರು, ಬಸವಾಭಿಮಾನಿಗಳು ಜಾತ್ರಾ ಸಮಿತಿಯ ಪದಾಧಿಕಾರಿಗಳು, ಲಿಂಗಾಯತ ಪ್ರಗತಿಶೀಲ ಸಂಘ, ಜಾಗತಿಕ ಲಿಂಗಾಯತ ಮಹಾಸಭಾ, ಬಸವದಳ-ಬಸವಕೇಂದ್ರದ ಅಧ್ಯಕ್ಷರು, ಸರ್ವ ಸದಸ್ಯರು, ಸಾರ್ವಜನಿಕರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ ಮತ್ತು ಪದಾಧಿಕಾರಿಗಳು ವಿನಂತಿಸಿದ್ದಾರೆ.

### ತೋಂಟದಾರ್ಯ ಜಾತ್ರೆ

# ಷಟಸ್ಥಲ ಧ್ವಜಾರೋಹಣ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

2025ನೇ ಸಾಲಿನ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಷಟ್‌ಸ್ಥಲ ಧ್ವಜಾರೋಹಣ ಕಾರ್ಯಕ್ರಮವು ಎಪ್ರಿಲ್ 5ರ ಮುಂಜಾನೆ 8.30 ಗಂಟೆಗೆ ಪರಮಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ಜರುಗಲಿದೆ.

ಶ್ರೀಮಠದ ಅಭಿಮಾನಿಗಳು, ಜಾತ್ರಾ ಸಮಿತಿಯ ಪದಾಧಿಕಾರಿಗಳು ಹಾಗೂ ಉಪಸಮಿತಿಗಳ ಪದಾಧಿಕಾರಿಗಳು, ಲಿಂಗಾಯತ ಪ್ರಗತಿಶೀಲ ಸಂಘ, ಜಾಗತಿಕ ಲಿಂಗಾಯತ ಮಹಾಸಭಾ, ಬಸವದಳ-ಬಸವಕೇಂದ್ರದ ಅಧ್ಯಕ್ಷರು, ಸರ್ವಸದಸ್ಯರು, ಸರ್ವಸದ್ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ ಮತ್ತು ಪದಾಧಿಕಾರಿಗಳು ವಿನಂತಿಸಿದ್ದಾರೆ.

### ಲಕ್ಕುಂಡಿಯಲ್ಲಿ ನರೇಗಾ ಕಾಮಗಾರಿ ಪರಿಶೀಲನೆ ನಡೆಸಿದ ಜಿ.ಪಂ ಸಿಇಓ ಭರತ್ ಎಸ್

# ಕೂಲಿಕಾರರ ಆರೋಗ್ಯ ತಪಾಸಣೆಗೂ ಒತ್ತು

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಲಕ್ಕುಂಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ 2025-26ನೇ ಸಾಲಿನ ಸಮುದಾಯ ಕಾಮಗಾರಿ ಸ್ಥಳಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಭೇಟಿ ನೀಡಿ ಕಾಮಗಾರಿಗಳ ಗುಣಮಟ್ಟ, ಅಳತೆ, ಯೋಜನೆಯ ಉದ್ದೇಶಗಳ ಕುರಿತು ಕೂಲಿಕಾರರೊಂದಿಗೆ ಸಮಾಲೋಚನೆ ನಡೆಸಿ, ಕಾಮಗಾರಿ ಕಡತ, ನ್ಯಾಶನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್ ಹಾಜರಾತಿ ಪರಿಶೀಲನೆ ನಡೆಸಿದರು.

ಇದೇ ಸಂದರ್ಭದಲ್ಲಿ ಗ್ರಾ.ಪಂ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ನರೇಗಾ ಕೂಲಿಕಾರರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಕಾಯಕ ಬಂಧುಗಳಿಗೆ ಹಾಗೂ ಕೂಲಿಕಾರರಿಗೆ ಪ್ರಥಮ ಚಿಕಿತ್ಸೆ ಪೆಟ್ಟಿಗೆ ವಿತರಿಸಿದರು.

ಬಳಿಕ ಮಾತನಾಡಿದ ಅವರು, ಒಂದು ಆರ್ಥಿಕ ವರ್ಷದಲ್ಲಿ ಪ್ರತಿ ಜಾಬ್ ಕಾರ್ಡ್‌ಗೆ 100 ದಿನ ಅಕುಶಲ ಕೂಲಿ ಕೆಲಸ ನೀಡಲಾಗುವುದು. ಕೂಲಿಕಾರರು ನಿರಂತರವಾಗಿ ಕೆಲಸ ಮಾಡಲು ಈಗಾಗಲೇ ನರೇಗಾ ಯೋಜನೆಯ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೊದನೆ ನೀಡಿದ್ದು, ಒಂದು ಕುಟುಂಬಕ್ಕೆ 100 ದಿನ ಕೂಲಿ ಕೆಲಸ ನೀಡಲು ಕಾಮಗಾರಿಗಳನ್ನು ಸಿದ್ಧಪಡಿಸಲಾಗಿದೆ ಎಂದರು.

ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಮಾತನಾಡಿ, ನರೇಗಾ ಯೋಜನೆಯಡಿ ಎಪ್ರಿಲ್ 1ರಿಂದ ಗ್ರಾ.ಪಂ ವ್ಯಾಪ್ತಿಯ ಪ್ರತಿಯೊಬ್ಬ ನೋಂದಾಯಿತ ಕೂಲಿಕಾರ ನಿರಂತರವಾಗಿ 100 ದಿನಗಳ ಕೆಲಸ ಪಡೆಯುವ ಅವಕಾಶ ಹೊಂದಿದ್ದು, ನಮೂನೆ -6ರಲ್ಲಿ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿ ಕೆಲಸ ಪಡೆಯಬಹುದು. ಪ್ರಸ್ತುತ ಆರ್ಥಿಕ ವರ್ಷ ಕೂಲಿ ಮೊತ್ತ 370 ರೂ.ಗೆ ಏರಿಕೆಯಾಗಿದೆ ಎಂದು ಮಾಹಿತಿ ನೀಡಿದರು.

ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ ಮಾತನಾಡಿ, ಯೋಜನೆಯಡಿ ಪ್ರತಿ ಕೂಲಿಕಾರ್ಮಿಕರಿಗೆ ಜಾಬ್ ಕಾರ್ಡ್ ವಿತರಿಸಿ ವಾರ್ಷಿಕ 100 ಮಾನವ ದಿನಗಳ ಕೂಲಿ ಕೆಲಸ ನೀಡಲಾಗುತ್ತದೆ. ಗ್ರಾಮದ ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು. ರೈತರು ತಮ್ಮ ಜಮೀನುಗಳಲ್ಲಿ ಬದು ನಿರ್ಮಾಣ, ಕೃಷಿ ಹೊಂಡ, ಎರೆ ಹುಳು ಘಟಕ, ದನದ ಕೊಟ್ಟಿಗೆ ಮುಂತಾದ ಕಾಮಗಾರಿಗಳ ಸದುಪಯೋಗ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಸಹಾಯಕ ನಿರ್ದೇಶಕ ಕುಮಾರ ಪೂಜಾರ ಮಾತನಾಡಿ, ಗ್ರಾಮೀಣ ಪ್ರದೇಶದ ಬಡವರಿಗೆ, ಶ್ರಮಿಕರಿಗೆ ನರೇಗಾ ಯೋಜನೆಯು ವರದಾನವಾಗಿದೆ. ಪುರುಷರು ಮತ್ತು ಮಹಿಳೆಯರಿಗೆ ಸಮಾನ ಕೂಲಿ, ಜೊತೆ-ಗೆ ಸಮಾನ ಕೆಲಸ. ಹಿರಿಯ ನಾಗರಿಕರಿಗೆ, ವಿಕಲಚೇತನರಿಗೆ, ತೃತೀಯ ಲಿಂಗಿಗಳಿಗೂ ಕೆಲಸ ನೀಡಲಾಗುತ್ತಿದೆ ಎಂದರು.



ಪಂಚಾಯತ ಅಭಿವೃದ್ಧಿ ಅಧಿಕಾರಿ ಅಮೀರ ನಾಯಕ ಮಾತನಾಡಿ, ನರೇಗಾ ಯೋಜನೆಯಡಿ ಉದ್ಯೋಗ ಚೀಟಿಯ ಮಹತ್ವ, ದೊರೆಯುವ ಸೌಲಭ್ಯವನ್ನು ಪಡೆಯಲು ನಿಯಮಾನುಸಾರ ಕೂಲಿ ಕಾರ್ಮಿಕರು ಕೆಲಸ ನಿರ್ವಹಣೆ ಮಾಡಬೇಕು ಎಂದು ತಿಳಿಸಿದರು.

ತಾಲೂಕಾ ವೈದ್ಯಾಧಿಕಾರಿ ಡಾ. ಕೋನಾ ಮಾತನಾಡಿ, ನರೇಗಾ ಯೋಜನೆಯಡಿ ನಡೆಯುತ್ತಿರುವ ಸಮುದಾಯ ಕಾಮಗಾರಿ ಸ್ಥಳದಲ್ಲಿ ಕೂಲಿ ಕಾರ್ಮಿಕರ ಆರೋಗ್ಯ ತಪಾಸಣೆ ಮಾಡಲಾಗುತ್ತದೆ. ನರೇಗಾ ಕೂಲಿಕಾರರಿಗೆ ಉತ್ತಮ ಆರೋಗ್ಯ ಕಲ್ಪಿಸುವ ನಿಟ್ಟಿನಲ್ಲಿ ಕಾಮಗಾರಿ ಸ್ಥಳದಲ್ಲಿಯೇ ಬಿಪಿ, ಶುಗರ್, ಮಧುಮೇಹ, ಅತಿ ರಕ್ತದೊತ್ತಡದಂತಹ ಪ್ರಾಥಮಿಕ ಅಸಾಂಕ್ರಾಮಿಕ ಗುಣಲಕ್ಷಣಗಳನ್ನು ಪತ್ತೆ ಹಚ್ಚಿ ಸೂಕ್ತ ಸಮಾಲೋಚನೆ ನೀಡಲಾಗುವುದು ಎಂದರು.

ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ, ತಾಲೂಕು ಐ.ಇ.ಸಿ ಸಂಯೋಜಕ ವಿರೇಶ, ತಾಂತ್ರಿಕ ಸಹಾಯಕ ಅಜಯ ಅಬ್ಬಿಗೇರಿ, ನರೇಗಾ ಸಿಬ್ಬಂದಿಗಳು, ಕಾಯಕ ಬಂಧುಗಳು, ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

ನರೇಗಾ ಯೋಜನೆಯ ಸಮರ್ಪಕ ಅನುಷ್ಠಾನದಲ್ಲಿ ಈಗ NMMS ಅಪ್ಲಿಕೇಶನ್ ಗಮನ ಸೆಳೆದಿದೆ. ಕೇಂದ್ರ ಸರ್ಕಾರ ಉದ್ಯೋಗ ಖಾತರಿ ಯೋಜನೆ ಅನುಷ್ಠಾನದಲ್ಲಿ ಹೊಣೆಗಾರಿಕೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ಸಲುವಾಗಿ ನ್ಯಾಶನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್ (NMMS) ಅಪ್ಲಿಕೇಶನ್ ಕಡ್ಡಾಯಗೊಳಿಸಿದೆ. ಇದರಲ್ಲಿ ಕೆಲಸ ನಿರ್ವಹಿಸುವ ಕೂಲಿಕಾರರ ಹಾಜರಾತಿಗಳನ್ನು ಜಿಯೋಟ್ಯಾಗ್ ಫೋಟೋಗ್ರಾಫ್ ಮುಖಾಂತರ ಪ್ರತಿ ದಿನ ಎರಡು ಬಾರಿ ಕಡ್ಡಾಯವಾಗಿ ಸೆರೆಹಿಡಿಯಲು ಕ್ರಮವಹಿಸಲಾಗುತ್ತಿದೆ.

# ಪ್ರೊ ಸತ್ತಾರ ಬಡೇಖಾನರ ಕಾರ್ಯ ಪ್ರಶಂಸನೀಯ

**■ವಿಜಯಸಾಕ್ಷಿ ಸುದ್ದಿ, ಗದಗ**

35 ವರ್ಷಗಳಿಂದ ಅನುಪಮ ಶಿಕ್ಷಣವನ್ನು ನೀಡಿ ದೇಶ ಕಟ್ಟುವ ಶಿಷ್ಯರನ್ನು ನಿರ್ಮಿಸಿ, ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ನಿರ್ಮಿಸಲು ಶ್ರಮಿಸುವ ಮೂಲಕ ಸೇವಾ ನಿವೃತ್ತರಾಗುತ್ತಿರುವ ಪ್ರೊ. ಸತ್ತಾರ ಬಡೇಖಾನ ಅವರ ಕಾರ್ಯ ಪ್ರಶಂಸನೀಯ ಎಂದು ಪ್ರಾಚಾರ್ಯ ಎಮ್. ಯು. ಹಿರೇಮಠ ಹೇಳಿದರು.





ಇಲ್ಲಿನ ಪ್ರತಿಷ್ಠಿತ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ ಸೇವಾ ನಿವೃತ್ತಿ ಹೊಂದಿದ ಪ್ರೊ. ಸತ್ತಾರ ಬಡೇಖಾನರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ. ಪ್ರಕಾಶ ದೇಶಪಾಂಡೆ, ಪ್ರೊ. ಪ್ರಕಾಶ ಕರಿಗಾರ ಮಾತನಾಡಿ, ಶಿಕ್ಷಣವೆಂದರೆ ಪಠ್ಯ ಕಲಿಕೆಯಲ್ಲ. ಜೀವನದ ಮೌಲ್ಯಗಳು, ಶಿಸ್ತು-ಸಂಸ್ಕಾರ ಕಲಿಸುವ ಕೆಲಸ ನಡೆದಾಗ ಮಾತ್ರ ಸಾಧ್ಯ. ತಮ್ಮ ವೃತ್ತಿ ಜೀವನಸುದ್ದಕ್ಕೂ ಜ್ಞಾನದಾಸೋಹ ಮಾಡಿರುವ ಪ್ರೊ. ಸತ್ತಾರ ಬಡೇಖಾನರ ಕಾರ್ಯ ಅವಿಸ್ಮರಣೀಯ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರೊ. ಸತ್ತಾರ ಬಡೇಖಾನ, ಸ್ಪರ್ಧಾತ್ಮಕ ಜಗತ್ತಿನಲ್ಲಿ ಉತ್ತಮ ಉದ್ಯೋಗ ಹೊಂದಲು, ವಿದ್ಯಾರ್ಥಿ ಹಂತದಲ್ಲಿಯೇ ತಮ್ಮ ಗುರಿ ಸಾಧಿಸಲು ಪೂರ್ವ ಯೋಜಿತ ಯೋಜನೆಯನ್ನು ಹಾಕಿಕೊಂಡು ಅಧ್ಯಯನ ಮಾಡಿದರೆ ಉತ್ತಮ ಸಾಧನೆ ಮಾಡಬಹುದು ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಗುರುವೃಂದ ಮಾರ್ಗದರ್ಶನ ನೀಡಲು ಮುಂದಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರೊ. ಎಸ್.ಯು. ಸಜ್ಜನಶೆಟ್ಟರ, ಡಾ. ಎಸ್.ಕೆ. ಪೂಜಾರ, ಪ್ರೊ. ಮಹಾಲಕ್ಷ್ಮಿ ಹುಟಗಿ, ಪ್ರೊ. ರೂಪಾ ಶ್ರೀನಿವಾಸ, ಪ್ರೊ. ಮಹಬೂಬಆರೀಫ ಸದರಸೋಪವಾಲೆ, ಪ್ರೊ. ಸತೀಶ ಸರ್ವಿ, ಪ್ರೊ. ದ್ಯಾಮಣ್ಣ ಮನಿಕಟ್ಟಿ, ಪ್ರೊ. ರಿಯಾಜಅಹ್ಮದ ದೊಡ್ಡಮನಿ, ಪ್ರೊ. ಪ್ರತಿಭಾ ಚವ್ಹಾಣ, ಪ್ರೊ. ಸುಮಿತ್ರಾ ಮೇದಾರ, ಪ್ರೊ. ವಹಿದಾ ಕಿಲ್ಲೆದಾರ, ಲಕ್ಷ್ಮೀ ನಾಗರಾಳ, ಶ್ರೀದೇವಿ ಸೇರಿದಂತೆ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಇದ್ದರು.

# ಮಾಜಿ ಸೈನಿಕರಿಂದ ಪರೀಕ್ಷಾ ಕೇಂದ್ರಕ್ಕೆ ಬಂದೋಬಸ್ತ್



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಶಿಕ್ಷಣ ಇಲಾಖೆಯಿಂದ ನಡೆಯುತ್ತಿರುವ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪರೀಕ್ಷಾ ಕೇಂದ್ರಕ್ಕೆ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾಧ್ಯಕ್ಷರಾದ ಬಸಲಿಂಗಪ್ಪ ಮುಂಡರಗಿ ನೇತೃತ್ವದಲ್ಲಿ, ರೋಣ ತಾಲೂಕಿನ ಅಧ್ಯಕ್ಷರು ಹಾಗೂ ಸರ್ವ ಸದಸ್ಯರ ಸಹಯೋಗದೊಂದಿಗೆ ರೋಣ ತಾಲೂಕಿನ ಬೆಳವಣಿಕಿ ಗ್ರಾಮದ ಶ್ರೀ ವೀರಭದ್ರೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಪರೀಕ್ಷಾ ಕೇಂದ್ರಕ್ಕೆ ಬಂದೋಬಸ್ತ್ ನೀಡಲಾಯಿತು.


ಶ್ರೀ ವೀರಭದ್ರೇಶ್ವರ ಪದವಿಪೂರ್ವ ಮಹಾವಿದ್ಯಾಲಯ ಪರೀಕ್ಷಾ ಕೇಂದ್ರದಲ್ಲಿ ಹಲವು ವರ್ಷಗಳಿಂದ ಕಿಡಿಗೇಡಿಗಳು ಪರೀಕ್ಷೆಗೆ ಅಡ್ಡಿಯನ್ನುಂಟುಮಾಡುವ ಘಟನೆಗಳು ನಡೆಯುತ್ತಿದ್ದು, ಕಳೆದೆರಡು ವರ್ಷಗಳಿಂದ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪರೀಕ್ಷಾ ಕೇಂದ್ರಕ್ಕೆ ಅಚ್ಚುಕಟ್ಟಾಗಿ ಬಂದೋಬಸ್ತ್ ನೀಡಿದ್ದಾರೆ. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಮತ್ತು ರೋಣ ತಾಲೂಕಿನ ಎಲ್ಲಾ ಮಾಜಿ ಸೈನಿಕರು ಮತ್ತು ರೋಣ ತಾಲೂಕಿನ ಪೊಲೀಸ್ ಸಿಬ್ಬಂದಿಯವರು ಸಹಕಾರ ನೀಡಿದರು.

### ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ, ಜನ ಜಾಗೃತಿ ಧರ್ಮ ಸಮಾರಂಭ

# ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಅಧರ್ಮಕ್ಕೆ ಹಲವು ದಾರಿ. ಆದರೆ ನಿಜವಾದ ಧರ್ಮಕ್ಕೆ ಒಂದೇ ದಾರಿ. ಅಶಾಂತಿಯಿಂದ ಬಳಲುತ್ತಿರುವ ಮನುಷ್ಯನಿಗೆ ಧರ್ಮವೊಂದೇ ಆಶಾಕಿರಣ. ಆಹಾರ, ಆರೋಗ್ಯ, ಆಧ್ಯಾತ್ಮಗಳೇ ನಿಜವಾದ ಸಂಪತ್ತೆಂಬುದನ್ನು ಯಾರೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಬುಧವಾರ ಶ್ರೀ ರಂಭಾಪುರಿ ಜಗದ್ಗುರುಗಳ ಜನ್ಮ ಭೂಮಿ ಹಳ್ಳಿಯಾಳ ಗ್ರಾಮದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ರಥೋತ್ಸವ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವಿಪತ್ತಿನ ಕಾಲದಲ್ಲೂ ಧರ್ಮವನ್ನು ಬಿಡದಿರುವವನೇ ನಿಜವಾದ ಧರ್ಮಾತ್ಮ. ಹುಟ್ಟು-ಸಾವು ನಮ್ಮ ಕೈಯಲ್ಲಿಲ್ಲ. ಆದರೆ ಬದುಕು ನಮ್ಮ ಕೈಯಲ್ಲಿದೆ. ಜಾತಿ-ಜಂಜಡಗಳ ಜಗದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಬಂಧುತ್ವದ ಸಂದೇಶವನ್ನು ಅನುಗ್ರಹಿಸಿ ಉದ್ಧರಿಸಿದವರು. ವೀರಶೈವ ಧರ್ಮ ಸಂಹಿತೆಯಲ್ಲಿ ಜೀವನ ದರ್ಶನದ ಆಧ್ಯಾತ್ಮ ಚಿಂತನಗಳನ್ನು ಬೋಧಿಸಿ ಹರಸಿ ಉದ್ಧರಿಸಿದ್ದಾರೆ. ಆಚಾರ್ಯ ಶ್ರೇಷ್ಠರಾದ ಶ್ರೀ ಜಗದ್ಗುರು ರೇಣುಕಾಚಾರ್ಯರು ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ ಅದರೊಂದಿಗೆ ಧರ್ಮ ಪ್ರಜ್ಞೆ, ಸದಾಚಾರ ಬೆಳೆದು ಬರಬೇಕೆಂದು ಬೋಧಿಸಿದ್ದಾರೆ. ಗ್ರಾಮದ ಎಲ್ಲಾ ಸದ್ಭಕ್ತರು ಸೌಹಾರ್ದತೆಯಿಂದ ರಥೋತ್ಸವ ನೆರವೇರಿಸಿದ್ದು ತಮಗೆ ಸಂತೋಷ ತಂದಿದೆ ಎಂದರು.

ಸಮಾರಂಭ ಉದ್ಘಾಟಿಸಿದ ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶ್ರೀಗಳು ಮಾತನಾಡಿ, ಅನುಭವದಿಂದ ಸಿಗುವ ಜ್ಞಾನ ಓದಿನಿಂದ ಸಿಗುವುದಿಲ್ಲ. ವೀರಶೈವ ಧರ್ಮದಲ್ಲಿ ಜ್ಞಾನ ಮತ್ತು ಕರ್ಮಕ್ಕೆ ಸಮಾನ ಅವಕಾಶ ಕಲ್ಪಿಸಿಕೊಟ್ಟಿದ್ದಾರೆ. ಹಸನಾದ ಬದುಕಿಗೆ ಆಧ್ಯಾತ್ಮದ ಅರಿವು ಮುಖ್ಯವೆಂದರು.

ಸೂಡಿ ಜುಕ್ತಿ ಹಿರೇಮಠದ ಡಾ. ಕೊಟ್ಟೂರು ಬಸವೇಶ್ವರ ಶ್ರೀಗಳು ಮಾತನಾಡಿ, ಮನುಷ್ಯ ಧರ್ಮಕ್ಕೆ ತಲೆಬಾಗಬೇಕೇ ಹೊರತು ಅವಿವೇಕಿಗಳಿಗಲ್ಲ. ಮನುಷ್ಯ ಸ್ವಾರ್ಥಕ್ಕಾಗಿ ಆದರ್ಶ ಮೌಲ್ಯಗಳನ್ನು ಬಲಿ ಕೊಡಬಾರದೆಂದರು. ಹಳೇಹುಬ್ಬಳ್ಳಿ ಶಿವಪ್ರಸಾದ ದೇವರು ನಿರೂಪಿಸಿದರು. ಸಮಾರಂಭಕ್ಕೂ ಮುನ್ನ ಶ್ರೀ ಜಗದ್ಗುರು ರೇಣುಕಾಚಾರ್ಯರ ರಥೋತ್ಸವ ವಿಜೃಂಭಣೆಯಿಂದ ಜರುಗಿತು.

### ಎಪ್ರಿಲ್ 5ರಿಂದ ಮೇ 31ರವರೆಗೆ ಬೇಸಿಗೆ ತರಬೇತಿ ಶಿಬಿರ


# ಕ್ರೀಡಾ ತರಬೇತಿಗಾಗಿ ಉತ್ತಮ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಗದುಗಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 10ರಿಂದ 18 ವರ್ಷದೊಳಗಿನವರಿಗಾಗಿ ಬೇಸಿಗೆ ತರಬೇತಿ ಶಿಬಿರವನ್ನು ಎಪ್ರಿಲ್ 5ರಿಂದ ಮೇ 31ರವರೆಗೆ ಆಯೋಜಿಸಲಾಗಿದೆ.

ಕ್ರೀಡೆಗಳು: ಈಜು, ಬ್ಯಾಡ್ಮಿಂಟನ್, ಫುಟ್‌ಬಾಲ್, ಸ್ಕೇಟಿಂಗ್, ಜಿಮ್, ಕ್ರಿಕೆಟ್, ಹಾಕಿ, ಸೈಕ್ಲಿಂಗ್, ಕುಸ್ತಿ.

ಈಜು: ಬೆಳಿಗ್ಗೆ 8ರಿಂದ 10ರವರೆಗೆ, ಸಂಜೆ 4ರಿಂದ 6ರವರೆಗೆ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಈಜುಕೊಳ ಮತ್ತು ಕಳಸಾಪುರ ರಸ್ತೆಯ ನಂದೀಶ್ವರ ನಗರ ಈಜುಕೊಳದಲ್ಲಿ ನಡೆಯಲಿದೆ. ಮಾಹಿತಿಗಾಗಿ ಶಿವಾನಂದ ಈಜು (7338689385) ಇವರನ್ನು ಸಂಪರ್ಕಿಸಬಹುದಾಗಿದೆ.



ಬ್ಯಾಡ್ಮಿಂಟನ್: ಬೆಳಿಗ್ಗೆ 6ರಿಂದ 10ರವರೆಗೆ, ಸಂಜೆ 4ರಿಂದ 7ರವರೆಗೆ ನಂದೀಶ್ವರ ನಗರದ ಒಳಾಂಗಣ ಕ್ರೀಡಾಂಗಣದಲ್ಲಿ, ತರಬೇತುದಾರರಾದ ಹನೀಫ್ (7892181797), ಗಜೇಂದ್ರಗಡ ಭಗತಸಿಂಗ್ ಕ್ರೀಡಾಂಗಣದಲ್ಲಿ ತರಬೇತುದಾರರಾದ ಅರುಣ ವನ್ನಾಲ (9743670431), ರೋಣ ದ್ರೋಣಾಚಾರ್ಯ ಒಳಾಂಗಣ ಕ್ರೀಡಾಂಗಣದಲ್ಲಿ ತರಬೇತುದಾರರಾದ ಬಸವರಾಜ ಹೊಸಳ್ಳಿ (8970838603) ಮಾರ್ಗದರ್ಶನದಲ್ಲಿ ನಡೆಯಲಿದೆ.

ಫುಟ್‌ಬಾಲ್: ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 6ರಿಂದ 9ರವರೆಗೆ, ಸಂಜೆ 4ರಿಂದ 7ರವರೆಗೆ ತರಬೇತುದಾರರಾದ ಶಶಿಕುಮಾರ ಮುಂಡರಗಿ, ಶ್ಯಾಮ ಮತ್ತು ರಾಘವೇಂದ್ರ ಮುಂಡರಗಿ ನೇತೃತ್ವದಲ್ಲಿ (7795012672, 9886796360, 8123350919) ನಡೆಯಲಿದೆ.

ಸ್ಕೇಟಿಂಗ್: ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 6ರಿಂದ 8ರವರೆಗೆ, ಸಂಜೆ 5.30ರಿಂದ 7ರವರೆಗೆ ನಡೆಯಲಿದ್ದು, ತರಬೇತುದಾರರಾದ ಮಂಜುನಾಥ ಕುರಿ (9980322548) ಇವರನ್ನು ಸಂಪರ್ಕಿಸಬೇಕು.

ಜಿಮ್: ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಬೆಳಿಗ್ಗೆ 6ರಿಂದ 9ರವರೆಗೆ, ಸಂಜೆ 5ರಿಂದ 7ರವರೆಗೆ ತರಬೇತುದಾರರಾದ ಸಂತೋಷ ಹೊಸಳ್ಳಿ (7676675947) ಮಾರ್ಗದರ್ಶನದಲ್ಲಿ ನಡೆಯಲಿದೆ.

ಕ್ರಿಕೆಟ್: ಗದುಗಿನ ಕ್ರಿಕೆಟ್ ಅಂಕಣ, ಹೊಸ ಕೋರ್ಟ್ ಹತ್ತಿರ ಬೆಳಿಗ್ಗೆ 6ರಿಂದ 8ರವರೆಗೆ, ಸಂಜೆ 5ರಿಂದ 7ರವರೆಗೆ ನಡೆಯಲಿದ್ದು, ಮಲ್ಲಿಕಾರ್ಜುನ್ (9886466390), ವೀರಣ್ಣ ಜಾನೋಪಂತರ್ (9743459707), ಅಸ್ಲಮ್ ಮುಧೋಳ (9739567030) ಇವರನ್ನು ಸಂಪರ್ಕಿಸಬಹುದು.

ಹಾಕಿ: ಬೆಟಗೇರಿಯ ಗಾಂಧಿನಗರ ಮಹಾತ್ಮ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಬೆಳಿಗ್ಗೆ 7ರಿಂದ 9ರವರೆಗೆ, ಸಂಜೆ 5ರಿಂದ 7ರವರೆಗೆ ತರಬೇತುದಾರ ಮಂಜುನಾಥ ಬಾಗಡೆ (9036533909) ಮಾರ್ಗದರ್ಶನದಲ್ಲಿ ನಡೆಯಲಿದೆ.

ಸೈಕ್ಲಿಂಗ್: ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 7ರಿಂದ 9ರವರೆಗೆ, ಸಂಜೆ 5ರಿಂದ 7ರವರೆಗೆ ತರಬೇತುದಾರರಾದ ವಿದ್ಯಾ ಕುಲಕರ್ಣಿ (8951936636) ನೇತೃತ್ವದಲ್ಲಿ ನಡೆಯಲಿದೆ.

ಕುಸ್ತಿ: ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 6ರಿಂದ 8ರವರೆಗೆ, ಸಂಜೆ 5ರಿಂದ 7ರವರೆಗೆ ತರಬೇತುದಾರ ವಿನಾಯಕ ಯಂಕಂಚಿ (90119717032) ಮಾರ್ಗದರ್ಶನದಲ್ಲಿ ನಡೆಯಲಿದೆ.

ಪ್ರವೇಶಾತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ್ ಜಿಲ್ಲಾ ಕ್ರೀಡಾಂಗಣ, ಗದಗ-ದೂರವಾಣಿ ಸಂಖ್ಯೆ-08372-238345 ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಕಟಣೆ ತಿಳಿಸಿದೆ.

### ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಬಸವ ಭವನ ಕಟ್ಟಡಕ್ಕೆ ಸಚಿವ ಎಚ್.ಕೆ. ಪಾಟೀಲ ನೆರವು

# ಸಚಿವರು ತಮ್ಮ ಮಾತನ್ನು ಉಳಿಸಿಕೊಂಡಿದ್ದಾರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಾ ಬಣಜಿಗ ಕ್ಷೇಮಾಭಿವೃದ್ಧಿ ಸಂಘದಿಂದ ನಿರ್ಮಾಣವಾಗುತ್ತಿರುವ ಬಸವ ಭವನ ಕಟ್ಟಡಕ್ಕೆ ಸಚಿವ ಎಚ್.ಕೆ ಪಾಟೀಲರು ಈಗಾಗಲೇ 25 ಲಕ್ಷ ರೂ ಅನುದಾನ ನೀಡಿದ್ದು, ಉಳಿದ 25 ಲಕ್ಷ ರೂ ಅನುದಾನವನ್ನು ಬಿಡುಗಡೆ ಮಾಡಿದ ಮಂಜೂರಾತಿ ಪತ್ರವನ್ನು ಸಮಾಜದ ಹಿರಿಯರಾದ ಗದಗ ಜಿಲ್ಲಾ ಅಧ್ಯಕ್ಷ ಈಶಣ್ಣ ಮುನವಳ್ಳಿ, ಕಟ್ಟಡ ಸಮಿತಿ ಅಧ್ಯಕ್ಷ ಕಿರಣ ಭೂಮಾ, ಉಪಾಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ನಾಗೇಶ ಸವಡಿ ಅವರಿಗೆ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಹಿಂದೆ ರಾಜಕೀಯ ಏಳಿಗಾಗಿ ದುಡಿದ ಬಣಜಿಗ ಸಮಾಜದ ಹಿರಿಯರಾದ ಬಸಪ್ಪ ಅಸೂಟಿ, ವೀರಪ್ಪ ಅಂಗಡಿ, ವೀರಭದ್ರಪ್ಪ ಬಳ್ಳಾರಿ ಮುಂತಾದವರು ಶಕ್ತಿಯಾಗಿ ನಿಂತಿದ್ದನ್ನು ಸ್ಮರಿಸಿದರು.





ಸಭೆಯಲ್ಲಿ ಸಮಾಜದ ಹಿರಿಯರಾದ ರೇವಣಸಿದ್ದಪ್ಪ ಎಳಮಲಿ, ಸುರೇಶ್ ನಿಲುಗಲ್, ಲಲಿತಾ ಇಂಗಳಹಳ್ಳಿ, ಲಲಿತಾ ಬ.ಅಸೂಟಿ, ವಿರೂಪಾಕ್ಷಪ್ಪ ಅಕ್ಕಿ, ಬಸವರಾಜ್ ರಾಮನಕೊಪ್ಪ, ಸಿದ್ದರಾಮಪ್ಪ ಉಮಚಗಿ, ಪ್ರೊ. ಎ.ಕೆ. ನಾಶಿ, ವಿಶ್ವನಾಥ್ ರಾಮನಕೊಪ್ಪ, ಡಾ. ರಾಜಶೇಖರ್ ಬಳ್ಳಾರಿ, ಅಶೋಕ್ ಯಾಳಗಿಶೆಟ್ಟರ, ಬಸವರಾಜ್ ಅಂಗಡಿ, ಚನ್ನವೀರಪ್ಪ ದುಂದೂರ, ಸುಶೀಲಮ್ಮ ಕೋಟಿ, ಶಿವಯೋಗಿ ಅಗಡಿ, ಮಹೇಶ್ ಮುಂಡರಗಿ, ರವಿ ಪಟ್ಟಣಶೆಟ್ಟಿ, ಚೇತನ್ ಅಂಗಡಿ, ಅಮರನಾಥ ಗಡಗಿ, ಅಡಿವೆಪ್ಪ ದುಂಡಿಸಿ, ಶರಣಪ್ಪ ಜಾಲಿಹಾಳ, ಚನ್ನಬಸಪ್ಪ ಅಕ್ಕಿ, ರವಿ ಪಟ್ಟಣಶೆಟ್ಟಿ, ವಿಶ್ವನಾಥ್ ಯಳಮಲಿ, ಗಂಗಾಧರ್ ಮೇಲಗೆರಿ, ವೀರಪ್ಪ ಸವಡಿ, ಮಹೇಶ್ ಬೆಲ್ಲದ, ಪ್ರಭು ಡಿಗ್ಗಾವಿ, ಮಾಂತೇಶ್ ಗದಗ, ಉಮೇಶ್ ನಾಲ್ವಾಡ, ಎ.ಕೆ. ಹೊಸಂಗಡಿ, ಶಶಿಧರ್ ಕಳಸಾಪುರಶೆಟ್ಟರ, ಕುಮಾರ್ ಬಳ್ಳಾರಿ, ಮಾಂತೇಶ್ ರಾಮಾನುಕೊಪ್ಪ, ಸಿದ್ದು ಉಮಚಗಿ, ಮಾಂತೇಶ್ ಸೂಡಿ, ಶಂಕರ ನೀರಲಕೇರಿ, ಅನೂಪ ಹುಬ್ಬಳ್ಳಿ, ಶ್ರೀಧರ ವಜ್ರಬಂಡಿ, ಗಿರೀಶ್ ಕೋರಿ, ಸುರೇಶ ಮಾಳವಾಡ, ಶಶಿಧರ ಅರಳಿ, ಈರಣ್ಣ ಗಡಗಿ, ಮುರಗೇಪ್ಪ ನಾಲ್ವಾಡ, ಮುತ್ತಣ್ಣ ಭರಡಿ, ಎಸ್.ವಿ. ಮೇಣಶಿಕಾಯಿ, ಸೋಮನಾಥ ಜಾಲಿ, ವಿಜಯಲಕ್ಷ್ಮೀ ಮಾನ್ವಿ, ಲಲಿತಾ ಸವಡಿ, ಉಮಾ ರಾಮನಕೊಪ್ಪ, ಮಂಜುನಾಥ ಲಕ್ಕುಂಡಿ, ಶಿವರಾಜ ಕೋಟಿ ಮುಂತಾದವರಿದ್ದರು.

ಗದಗ-ಬೆಟಗೇರಿ ಶಹರ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಗದಗ ತಾಲೂಕಾ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡುತ್ತಾ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲರು ನಮ್ಮ ಸಮಾಜದ ಕಟ್ಟಡ ಕಾಮಗಾರಿಗಾಗಿ 50 ಲಕ್ಷ ರೂಗಳನ್ನು ನೀಡಿ, ತಮ್ಮ ಮಾತನ್ನು ಉಳಿಸಿಕೊಂಡಿದ್ದಾರೆ ಎಂದರಲ್ಲದೆ, ಇನ್ನೂ 50 ಲಕ್ಷ ರೂ.ಗಳ ಅನುದಾನವನ್ನು ನೀಡಬೇಕೆಂದು ವಿನಂತಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka